ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 94

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 19-03-2026



**SEHRI & IFTARI TIME**

DAY :THURSDAY

RAMZAN : 29

DATE: 19.03.2026

END TIME OF SEHRI :5:11 AM

FAJAR AZAAN : 5:16 AM

IFTAR TIME : 6:34 PM



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಉಪಚುನಾವಣೆಗೆ: ಅಭ್ಯರ್ಥಿ ಆಯ್ಕೆಗೆ ಕೈ-ಬಿಜೆಪಿ ಕಸರತ್ತು

**ಬೆಂಗಳೂರು, ಮಾ. 18-** ರಾಜ್ಯದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ನಿಗದಿಯಾಗುತ್ತಿದ್ದಂತೆ ಆಡಳಿತಾರೂಢ ಕಾಂಗ್ರೆಸ್ ಮತ್ತು ವಿಪಕ್ಷ ಬಿಜೆಪಿಯಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಅಭ್ಯರ್ಥಿಗಳ ಆಯ್ಕೆ ಸಂಬಂಧ ಎರಡು ಪಕ್ಷಗಳಲ್ಲಿ ಸಮಾಲೋಚನೆಗಳು ನಡೆದಿವೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಅಭ್ಯರ್ಥಿ ಆಯ್ಕೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಧಾನಸೌಧದ ತಮ್ಮ ಕಚೇರಿಯಲ್ಲಿಂದು ಮಾಜಿ ಸಚಿವ ದಿ. ಹೆಚ್.ವೈ. ಮೇಟಿರವರ ಪುತ್ರ ಹಾಗೂ ಪುತ್ರಿಯರ ಜತೆ ಸಮಾಲೋಚನೆ ನಡೆಸಿದರು.

ಈ ಉಪಚುನಾವಣೆಯಲ್ಲಿ ತಮಗೆ ಟಿಕೆಟ್ ನೀಡಬೇಕೆಂದು ಮೇಟಿ ಕುಟುಂಬ ಪಟ್ಟು ಹಿಡಿದಿದ್ದು, ಒಂದು ವೇಳೆ ಕಾಂಗ್ರೆಸ್ ಪಕ್ಷ ತಮಗೆ ಟಿಕೆಟ್ ನೀಡದಿದ್ದರೆ ಚುನಾವಣೆಯಲ್ಲಿ ಸ್ಪರ್ಧೆ ಮಾಡುವುದಾಗಿ ಹೆಚ್.ವೈ. ಮೇಟಿ ರವರ ಪುತ್ರಿ ಮಹದೇವಿ ಮೇಟಿ ಹೇಳಿದ್ದರು.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಮಾಜಿ ಸಚಿವ ದಿ. ಹೆಚ್.ವೈ. ಮೇಟಿಯವರ ಪುತ್ರರಾದ ಮಲ್ಲಿಕಾರ್ಜುನ ಮೇಟಿ, ಉಮೇಶ್ ಮೇಟಿ ಹಾಗೂ ಪುತ್ರಿಯರಾದ ಮಹದೇವಿ ಮೇಟಿ, ಬಾಯಕ್ಕ ಮೇಟಿ ರವರೊಂದಿಗೆ ಚರ್ಚೆ ನಡೆಸಿದರು.



**ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಿ. ಎಚ್.ವೈ. ಮೇಟಿ ಅವರ ಪುತ್ರರಾದ ಮಲ್ಲಿಕಾರ್ಜುನ, ಉಮೇಶ್, ಪುತ್ರಿಯರಾದ ಬಾಯಕ್ಕ ಮತ್ತು ಮಹಾದೇವಿ ಅವರೊಂದಿಗೆ ಇಂದು ಚರ್ಚೆ ನಡೆಸಿದರು.**

ಬಾಗಲಕೋಟೆಯಲ್ಲಿ ಯಾರನ್ನು ಅಭ್ಯರ್ಥಿಯನ್ನಾಗಿಸಬೇಕು ಎಂಬ ಬಗ್ಗೆ ಪಕ್ಷದ ಹೈಕಮಾಂಡ್ ತೀರ್ಮಾನ ಕೈಗೊಳ್ಳುತ್ತದೆ. ಹೈಕಮಾಂಡ್ ತೀರ್ಮಾನಿಸುವ ಅಭ್ಯರ್ಥಿಗೆ ನೀವೆಲ್ಲರೂ ಬೆಂಬಲ ನೀಡಬೇಕು. ಅವರ ಪರವಾಗಿ ನೀವೆಲ್ಲರೂ ಕೆಲಸ ಮಾಡಬೇಕು ಎಂದು ಮೇಟಿ ಕುಟುಂಬಸ್ಥರಿಗೆ ಸೂಚನೆ ನೀಡಿದರು ಎಂದು ಹೇಳಲಾಗಿದೆ. ಬಾಗಲಕೋಟೆಯಲ್ಲಿ ಯಾರನ್ನು ಅಭ್ಯರ್ಥಿಯನ್ನಾಗಿಸಿದರೆ ಗೆಲುವು ಸಾಧ್ಯವಾಗುತ್ತದೆ ಎಂಬುದರ ಮೇಲೆ ಅಭ್ಯರ್ಥಿಯನ್ನು ಹೈಕಮಾಂಡ್ ಆಯ್ಕೆ ಮಾಡುತ್ತದೆ. ಯಾರೇ ಅಭ್ಯರ್ಥಿಯಾಗಲೀ ಎಲ್ಲರೂ ಒಟ್ಟಾಗಿ ಕೆಲಸ ಮಾಡಿ ಎಂದು ಮುಖ್ಯಮಂತ್ರಿಗಳು ಹೇಳಿದರು ಎನ್ನಲಾಗಿದೆ.

ಬಿಜೆಪಿ ಅಭ್ಯರ್ಥಿ ಆಯ್ಕೆ ಇಂದು ಅಂತಿಮ-ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಬಿಜೆಪಿ ಇಂದು ಅಭ್ಯರ್ಥಿಯನ್ನು ಅಂತಿಮಗೊಳಿಸಲಿದ್ದು, ಬಾಗಲಕೋಟೆಯಿಂದ ಮಾಜಿ ಶಾಸಕ ವೀರಣ್ಣ ಚರಂತಿಮಠ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಯಶವಂತರಾವ್ ಜಾಧವ್ ರವರು ಬಿಜೆಪಿ ಅಭ್ಯರ್ಥಿಗಳಾಗುವ ಸಾಧ್ಯತೆ ಇದೆ.

ರಾಜ್ಯ ಬಿಜೆಪಿಯ ಕೋರ್ ಕಮಿಟಿ ಸಭೆ ಸೇರಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಪಕ್ಷದ ಹೈಕಮಾಂಡ್‌ಗೆ ಕಳುಹಿಸಿದ್ದು, ಬಿಜೆಪಿ ಹೈಕಮಾಂಡ್ ಇಂದು ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆಯನ್ನು ಅಂತಿಮಗೊಳಿಸಲಿದೆ ಎಂದು ಹೇಳಲಾಗಿದೆ.

## ಪತ್ರಿಕಾ ಭವನಕ್ಕೆ ನಿವೇಶನ ಮಂಜೂರು ಮಾಡುವಂತೆ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪುರಸಭೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದವತಿಯಿಂದ ಪುರಸಭೆ ವ್ಯವಸ್ಥಾಪಕರಾದ ನರಸಿಂಹ ರವರಿಗೆ ಮನವಿ ಸಲ್ಲಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷರಾದ ಆಶೋಕ ತಡಕಲ್ ಮಾತನಾಡಿ ಪಟ್ಟಣದಲ್ಲಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ದಿನಮಾಧ್ಯಮ ಪತ್ರಿಕಾ ವರದಿಗಾರರನ್ನು ಒಳಗೊಂಡಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕಕ್ಕೆ ತನ್ನದೆ ಆದ ಸ್ವಂತ ಕಚೇರಿ ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ಸುದ್ದಿಗೋಷ್ಠಿಗಳನ್ನು ನಡೆಸುವುದಕ್ಕೆ ಹಾಗೂ ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳಿಗೆ ತಮ್ಮ ಇಲಾಖೆಯ ಚಟುವಟಿಕೆಗಳ ಬಗ್ಗೆ ಪ್ರಕಟಣೆ ಹಾಗೂ ಮಾಹಿತಿಯನ್ನು ಪತ್ರಕರ್ತರಿಗೆ ನೀಡುವುದಕ್ಕೆ ತೊಂದರೆಯಾಗಿರುವುದರಿಂದ ಪುರಸಭೆ ವ್ಯಾಪ್ತಿಯಲ್ಲಿನ ಸಿ.ಎ. ನಿವೇಶನವನ್ನು ಮಂಜೂರು ಮಾಡಿದಲ್ಲಿ ಸ್ವಂತ ಕಟ್ಟಡವನ್ನು ಹೊಂದುವುದಕ್ಕೆ ಅನುಕೂಲವಾಗುತ್ತದೆ ಹಾಗೂ ಮುಂಬರುವ ಪುರಸಭೆಯ 2026-27 ನೇ ಬಜೆಟ್‌ನಲ್ಲಿ ಪತ್ರಕರ್ತರ ಆರೋಗ್ಯ ವಿಮೆ ಯೋಜನೆಗಾಗಿ 50 ಲಕ್ಷ ರೂಗಳನ್ನು ಮೀಸಲಿಡುವಂತೆ ಕೋರಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಪ್ರತಿನಿಧಿಗಳಾದ ತಾಯಪ್ಪ ಬಿ.ಹೊಸೂರು, ಪಿ. ಪರಮೇಶ, ಮಾರೆಪ್ಪ ದೊಡ್ಡಮನಿ, ಸಿದ್ದಾರಾಮಯ್ಯಸ್ವಾಮಿ, ರವಿಕುಮಾರ ಅಲ್ದಾಳ್, ವಿಜಯಕುಮಾರ, ಅಜಯಕುಮಾರ, ಸೈಯಾದ್ ಅಬ್ದುಲ್ ಗಯಾಸ್,ಶಿವಕುಮಾರ ಜಗ್ಲಿ, ರಾಜಶೇಖರ ಸ್ವಾಮಿ, ಜಿತೇಂದ್ರಸ್ವಾಮಿ, ಬಸವರಾಜ.ಕೆ. ನವೀನ್ ಕುಮಾರ, ಶಂಕ್ರಪ್ಪ, ಬಸವರಾಜ ಕನ್ನಾರಿ,ಜಲಾಲ್, ರಾಜಶೇಖರ,ಕಿರಣ್ ಕುಮಾರ, ದೇವರಾಜ, ಖಾದರಬಾಷ, ಬಸವರಾಜ ತಡಕಲ್, ಗೋವಿಂದರಾಜ, ಸೇರಿದಂತೆ ಇನ್ನಿತರರು ಇದ್ದರು.

## ತಾಲೂಕಿನಾದ್ಯಂತ ಶಾಂತಿಯುತವಾಗಿ ನಡೆದ ಮೊದಲನೇ ದಿನದ ಎಸ್ .ಎಸ್.ಎಲ್.ಸಿ . ವಾರ್ಷಿಕ ಪರೀಕ್ಷೆ

ಧೈರ್ಯದ ದಾರಿ

**ಮಾನ್ವಿ:** ಮಾನ್ವಿ ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಪರೀಕ್ಷೆ ಕೇಂದ್ರಗಳಲ್ಲಿ ಬುಧುವಾರ 2025-26ನೇ ಸಾಲಿನ ಎಸ್ .ಎಸ್.ಎಲ್.ಸಿ ಪರೀಕ್ಷೆಗಳು ಶಾಂತಿಯುತವಾಗಿ ನಡೆದವು ಬೆಳಿಗ್ಗೆ 10 ರಿಂದ ಪ್ರಾರಂಭವಾದ ಪರೀಕ್ಷೆಗಳಿಗೆ ವಿದ್ಯಾರ್ಥಿಗಳು ಉತ್ಸಹದಿಂದ ಆಗಮಿಸಿ ಪರೀಕ್ಷೆಗಳನ್ನು ಬರೆದರು.

ತಾಲೂಕಿನ ವಿವಿಧ ಪರೀಕ್ಷ ಕೇಂದ್ರಗಳಿಗೆ ತಾಲೂಕು ಎಸ್ .ಎಸ್.ಎಲ್.ಸಿ ಪರೀಕ್ಷೆಗಳ ನೋಡಲ್ ಆಧಿಕಾರಿ ಜೀವನ್ ಸಾಬ್ ಹಾಗೂ ಮಾನ್ವಿ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ. ಭೇಟಿ ನೀಡಿ ಪರಿಶೀಲನೆ ಮಾಡಿದರು.

ತಾ. ಎಸ್ .ಎಸ್.ಎಲ್.ಸಿ ಪರೀಕ್ಷೆಗಳ ನೋಡಲ್ ಆಧಿಕಾರಿ ಜೀವನ್ ಸಾಬ್ ಮಾತನಾಡಿ ತಾಲೂಕಿನ ಎಲ್ಲಾ 20 ಪರೀಕ್ಷ ಕೇಂದ್ರಗಳಲ್ಲಿ ಇಂದು ಮೊದಲನೇ ಪರೀಕ್ಷೆ ಕನ್ನಡ ವಿಷಯದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಆಗಮಿಸಿ ಪರೀಕ್ಷೆಗಳನ್ನು ಬರೆದಿದ್ದಾರೆ. ತಾಲೂಕಿನಲ್ಲಿ ಯಾವುದೆ ಆಹಿತಕರ ಘಟನೆಗಳು ನಡೆದಿಲ್ಲ, ಪರೀಕ್ಷೆಗಳನ್ನು ಮುಕ್ತವಾಗಿ ಬರೆಯುವುದಕ್ಕೆ ಶಿಕ್ಷಣ ಇಲಾಖೆಯಿಂದ ಅಗತ್ಯವಾದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪಟ್ಟಣದ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ. ಮಾತನಾಡಿ ಅಖಂಡ ಮಾನವಿ ತಾಲೂಕಿನಲ್ಲಿ 2025-26ನೇ ಸಾಲಿನ ಎಸ್ .ಎಸ್.ಎಲ್.ಸಿ ಪರೀಕ್ಷೆಗಾಗಿ ಮಾನ್ವಿ ತಾಲೂಕಿನಲ್ಲಿ 9 ಹಾಗೂ ಸಿರವಾರ ತಾಲೂಕಿನಲ್ಲಿ 9 ಹಾಗೂ ಮಸ್ಕಿ ತಾಲೂಕಿನಲ್ಲಿ 2 ಒಟ್ಟು 20 ಪರೀಕ್ಷ ಕೇಂದ್ರಗಳಲ್ಲಿ ಇಂದು ಪರೀಕ್ಷೆಗಳು ನಡೆದಿದ್ದು ತಾಲೂಕಿನಿಂದ 5583 ವಿದ್ಯಾರ್ಥಿಗಳು ನೋಂದಯಿಸಿಕೊಂಡಿದ್ದು ಮೊದಲನೇ ದಿನದ ಕನ್ನಡ ಪರೀಕ್ಷೆಗೆ 5413 ವಿದ್ಯಾರ್ಥಿಗಳು ಹಾಜರಾಗಿ ಪರೀಕ್ಷೆಗಳನ್ನು ಬರೆದಿದ್ದು



170 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ ,ಖಾಸಗಿ ಅಭ್ಯರ್ಥಿಗಳು ಹಾಗೂ ಪುನರಾವರ್ತಿತ ಅಭ್ಯರ್ಥಿಗಳು ಕೂಡ ಪರೀಕ್ಷೆಯನ್ನು ಬರೆದಿದ್ದಾರೆ. ಪರೀಕ್ಷೆ ನಡೆಯುವ ಎಲ್ಲಾ ಕೋಠಡಿಗಳಲ್ಲಿ ಕೂಡ ಸಿ.ಸಿ.ಟೀವಿ ಅಳವಡಿಸಲಾಗಿದ್ದು ನಕಲು ನಡೆಯುವುದಕ್ಕೆ ಅವಕಾಶ ನೀಡದೆ ಮುಕ್ತವಾಗಿ ಸಿ.ಸಿ. ಟೀವಿ ಕಣ್ಗಾವಲಿನಲ್ಲಿ ನಡೆಸಲಾಗಿದೆ. 20 ಮುಖ್ಯ ಅಧೀಕ್ಷಕರು ಹಾಗೂ 4 ಉಪ ಮುಖ್ಯ ಅಧೀಕ್ಷಕರು, 20 ಪ್ರಶ್ನೆಪತ್ರಿಕೆ ಅಭಿರಕ್ಷಕರು ಹಾಗೂ 20 ಸ್ಥಾನಿಕ ಜಾಗೃತದಳ ಅಧಿಕಾರಿಗಳು ಮತ್ತು 7 ಮಾರ್ಗಾಧಿಕಾರಿಗಳು ಇಂದು ಪರೀಕ್ಷೆಗಳು ಉತ್ತಮ ರೀತಿಯಾಗಿ ನಡೆಯುವುದಕ್ಕೆ ಕಾರ್ಯನಿರ್ವಹಿಸಿದ್ದಾರೆ ಪರೀಕ್ಷಾ ಕೇಂದ್ರಗಳ ಸುತ್ತ ನಕಲು ತಡೆಯುವುದಕ್ಕೆ ಸೂಕ್ತ ಕ್ರಮ ಕೈಗೋಳಲಾಗಿತ್ತು ಹಾಗೂ ಪರೀಕ್ಷ ಕೇಂದ್ರಗಳ ಸುತ್ತ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

ಶಿಕ್ಷಣ ಅಧಿಕಾರಿ ಮಹೇಶ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಇದ್ದರು.

## ಸಿರವಾರ: ಸಚಿವ ಎನ್.ಎಸ್. ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ್ ನೇತೃತ್ವದಲ್ಲಿ 'ದಾವತ್-ಎ-ಇಫ್ತಾರ್'



ಧೈರ್ಯದ ದಾರಿ

**ಸಿರುವಾರ:** ಮಾನ್ವಿ ವಿಧಾನಸಭಾ ಕ್ಷೇತ್ರದ ಸಿರವಾರ ಪಟ್ಟಣದ ಶಾದಿ ಮಹಲ್‌ನಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಹಾಗೂ ಶಾಸಕ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಅವರ ನೇತೃತ್ವದಲ್ಲಿ ಮಂಗಳವಾರ ರಂದು ಮುಸ್ಲಿಂ ಬಾಂಧವರಿಗಾಗಿ ಪವಿತ್ರ 'ದಾವತ್-ಎ-ಇಫ್ತಾರ್' ಕೂಟವನ್ನು ಹಮ್ಮಿಕೊಳ್ಳಲಾಗಿತ್ತು.

ಮಾನವೀಯ ಮೌಲ್ಯಗಳ ಸಾರ:

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ. ಹಂಪಯ್ಯ ನಾಯಕ್, "ರಂಜಾನ್ ಉಪವಾಸ, ತಾಳ್ಮೆ, ಸಹಾನುಭೂತಿ ಮತ್ತು ಮಾನವೀಯತೆಯ ಮೌಲ್ಯಗಳನ್ನು ಸಾರುತ್ತದೆ. ಸಮಾಜದಲ್ಲಿ ಸೌಹಾರ್ದತೆ ಮತ್ತು ಸಹಬಾಳ್ವೆಯನ್ನು ಬಲಪಡಿಸುವ ಈ ಪವಿತ್ರ ಮಾಸದಲ್ಲಿ, ಎಲ್ಲರೊಂದಿಗೆ ಕುಳಿತು ಫಲಹಾರ ಸೇವಿಸಿದ್ದು ಮನಸ್ಸಿಗೆ ಸಂತಸ ತಂದಿದೆ," ಎಂದರು.

ಮುಖಂಡ ಗುಡದಿನ್ನಿ ಶಾಣಪ್ಪ ಮಾತನಾಡಿ, "ಜಾತಿ-ಮತ ಭೇದವಿಲ್ಲದೆ ನಾವೆಲ್ಲರೂ ಒಟ್ಟಾಗಿ ಹಬ್ಬ ಆಚರಿಸುತ್ತಿರುವುದು ನಮ್ಮ ಭಾಗದ ಭಾವೈಕ್ಯತೆಗೆ ಸಾಕ್ಷಿಯಾಗಿದೆ," ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಚುಕ್ಕಿ ಶಿವಕುಮಾರ್ ಸಾಹುಕಾರ್, ಚುಕ್ಕಿ ಸೂಗಪ್ಪ ಸಾಹುಕಾರ್,ಪಟ್ಟಣ ಪಂಚಾಯಿತಿಯ ಅಧ್ಯಕ್ಷ ರಾದ ಹಾಜಿ ಚೌದ್ರಿ, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬ್ರಿಜೇಶ ಪಾಟೀಲ್, ಪಟ್ಟಣ ಪಂಚಾಯಿತಿಯ ಸದಸ್ಯರು ಹಿರಿಯರಾದ ಹಾಸನಲಿ ಸಾಬ್, ಮೌಲಾಸಾಬ್ ವರ್ಚಸ್, ಗುಡದಿನ್ನಿ ಶರಣಯ್ಯ ನಾಯಕ್ ಸೈಯದ್ ಖಾಲಿದ್ ಖಾದ್ರಿ, ಶ್ರೀನಿವಾಸ್ ಜಾಲಪುರ್ ಕ್ಯಾಂಪ್, ಬಸವರಾಜ್ ನಾಯಕ್ ಜಾಲಪುರ್, ಶಿವಶರಣ ಅರಿಕೇರಿ, ಸೈಯದ್ ನಜರುದ್ದೀನ್ ಖಾದ್ರಿ,ಬುಡುಸಾಬ್ ನಿರಮಾನ್ವಿ, ಎಚ್ ಕೆ ಅಂಬರೀಶ್ ಅಪ್ಪ, ದುರ್ಗಣ್ಣ, ರಂಗನಾಥ್ ನಾಯಕ್, ಮಹಿಳಾ ಬ್ಲಾಕ್ ಕಾಂಗ್ರೆಸ್ ನ ಅಧ್ಯಕ್ಷನಿ ಶ್ರೀಮತಿ ರೇಣುಕಾ,ಯುವ ಕಾಂಗ್ರೆಸ್ ಅಧ್ಯಕ್ಷರಾದ ರಫಿ, ಸಿರುವಾರ್ ತಾಲೂಕ ದಂಡಾಧಿಕಾರಿಗಳಾದ ಅಶೋಕ್ ಪವಾರ್, ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳಾದ ಸುರೇಶ್, ಇನ್ನಿತರರು ಉಪಸ್ಥಿತರಿದ್ದರು.

## ರಂಜಾನ್ ಹಬ್ಬಕ್ಕೆ ಮೂಲಸೌಕರ್ಯ ಕಲ್ಪಿಸಲು ತಹಶೀಲ್ದಾರ್‌ಗೆ ಮನವಿ

ಧೈರ್ಯದ ದಾರಿ

**ಸಿರವಾರ:** ಮುಂಬರುವ ಮಾರ್ಚ್ 21, 2026ರ ಶನಿವಾರ ಮುಸ್ಲಿಂ ಬಾಂಧವರ ಪವಿತ್ರ ರಂಜಾನ್ (ಈದ್-ಉಲ್-ಫಿತರ್) ಹಬ್ಬವಿರುವ ಹಿನ್ನೆಲೆಯಲ್ಲಿ, ಸಿರವಾರ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರಿಗೆ ಈದ್ಗಾ ಮೈದಾನದಲ್ಲಿ ಪ್ರಾರ್ಥನೆ ಸಲ್ಲಿಸಲು ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಕೋರಿ ಭಾರತೀಯ ಮಾನವ ಹಕ್ಕುಗಳ ಪರಿಷತ್ ವತಿಯಿಂದ ಇಂದು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.




ಪ್ರಮುಖ ಬೇಡಿಕೆಗಳು ಮತ್ತು ಸಾರ್ವಜನಿಕ ಸೌಲಭ್ಯಗಳು

ಪ್ರತಿ ವರ್ಷದಂತೆ ಈ ಬಾರಿಯೂ ಸಹಸ್ರಾರು ಭಕ್ತಾದಿಗಳು ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಮಾರ್ಚ್ ತಿಂಗಳ ತೀವ್ರ ಬಿಸಿಲಿನ ತಾಪವನ್ನು ಪರಿಗಣಿಸಿ, ಭಕ್ತಾದಿಗಳಿಗೆ ತೊಂದರೆಯಾಗದಂತೆ ಈ ಕೆಳಗಿನ ವ್ಯವಸ್ಥೆಗಳನ್ನು ಮಾಡುವಂತೆ ಪರಿಷತ್ ಒತ್ತಾಯಿಸಿದೆ:

ನೆರಳಿನ ವ್ಯವಸ್ಥೆ: ಪ್ರಾರ್ಥನಾ ಸ್ಥಳದಲ್ಲಿ ಬಿಸಿಲಿನಿಂದ ರಕ್ಷಣೆ ಪಡೆಯಲು ವಿಶಾಲವಾದ ಶಾಮಿಯಾನ ಹಾಗೂ ನೆರಳಿನ ವ್ಯವಸ್ಥೆ ಮಾಡಬೇಕು.

ಶುದ್ಧ ಕುಡಿಯುವ ನೀರು: ಮೈದಾನದ ಆವರಣದಲ್ಲಿ ಭಕ್ತಾದಿಗಳಿಗಾಗಿ ನೀರಿನ ಟ್ಯಾಂಕರ್‌ಗಳ ಮೂಲಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.

ಹಿರಿಯ ನಾಗರಿಕರಿಗೆ ಆದ್ಯತೆ: ವೃದ್ಧರು ಮತ್ತು ಅಶಕ್ತರು ಕುಳಿತು ಪ್ರಾರ್ಥನೆ ಸಲ್ಲಿಸಲು ಸೂಕ್ತ ಆಸನ (ಕುರ್ಚಿ) ವ್ಯವಸ್ಥೆ ಇರಬೇಕು.

ತುರ್ತು ಆರೋಗ್ಯ ಸೇವೆ: ಪ್ರಾರ್ಥನಾ ಸ್ಥಳದಲ್ಲಿ ಯಾವುದೇ ಆರೋಗ್ಯ ಸಮಸ್ಯೆಗಳು ಎದುರಾದಲ್ಲಿ ತಕ್ಷಣ ಸ್ಪಂದಿಸಲು ಆಂಬುಲೆನ್ಸ್ ಹಾಗೂ ವೈದ್ಯಕೀಯ ಸಿಬ್ಬಂದಿ ಸನ್ನದ್ಧವಾಗಿರಬೇಕು.

ಬಿಗಿ ಪೊಲೀಸ್ ಬಂದೋಬಸ್ತ್: ಹಬ್ಬದ ಸಮಯದಲ್ಲಿ ಶಾಂತಿ ಕಾಪಾಡಲು ಮತ್ತು ಸುಗಮ ಸಂಚಾರಕ್ಕಾಗಿ ಮೈದಾನದ ಸುತ್ತಮುತ್ತ ಪೊಲೀಸ್ ಭದ್ರತೆ ನಿಯೋಜಿಸಬೇಕು.

ಸೌಹಾರ್ದಯುತ ಆಚರಣೆಗೆ ಕರೆ ಈ ಸಂದರ್ಭದಲ್ಲಿ ಮಾತನಾಡಿದ ಪರಿಷತ್ತಿನ ಪದಾಧಿಕಾರಿಗಳು, "ಸಿರವಾರ ಮತ್ತು ಸುತ್ತಮುತ್ತಲಿನ ಹಳ್ಳಿಗಳಿಂದ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಈ ಪವಿತ್ರ ದಿನದಂದು ಒಂದೆಡೆ ಸೇರುತ್ತಾರೆ. ಸಾರ್ವಜನಿಕ ಹಿತದೃಷ್ಟಿಯಿಂದ ಆಡಳಿತ ಮಂಡಳಿಯು ಶೀಘ್ರವಾಗಿ ಸ್ಪಂದಿಸಿ, ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಬೇಕು," ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಿರವಾರದ ಮುಸ್ಲಿಂ ಮುಖಂಡರು ಹಾಗೂ ಭಾರತೀಯ ಮಾನವ ಹಕ್ಕುಗಳ ಪರಿಷತ್ತಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಯುವ ಶಕ್ತಿಯೇ ರಾಷ್ಟ್ರದ ಬೆನ್ನೆಲುಬು : ಆಂಜನೇಯ ನಸಲಾಪುರ



ಧೈರ್ಯದ ದಾರಿ

**ಸಿರವಾರ:** ಒಂದು ರಾಷ್ಟ್ರ ಅಭಿವೃದ್ಧಿಯಾಗಬೇಕಾದರೆ ಯುವಶಕ್ತಿ ಜಾಗೃತರಾದಾಗ ದೇಶ ಉತ್ತಮ ರಾಷ್ಟ್ರವಾಗುತ್ತದೆ ಎಂದು ಆಂಜನೇಯ ನಸಲಾಪುರ ಹೇಳಿದರು. ಸಿರವಾರ ತಾಲೂಕಿನ ಮಾಡಗಿರಿ ಗ್ರಾಮದಲ್ಲಿ ಸಿದ್ದಾರ್ಥ ಪದವಿ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ 6ನೇ ದಿನದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಒಂದು ಕಾರ್ಯಕ್ರಮದಲ್ಲಿ ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಎಂಬ ವಿಷಯದ ಕುರಿತು ಆಂಜನೇಯ ನಸಲಾಪುರ ಮಾತನಾಡಿ ರಾಷ್ಟ್ರ ನಿರ್ಮಾಣ ಎನ್ನುವುದು ಜನರನ್ನು ಸಂಘಟಿಸಿ ಅವರಲ್ಲಿ ಸಾಮರಸ್ಯ ಮೂಡಿಸಿ, ಎಲ್ಲಾರು ಒಪ್ಪಿಕೊಳ್ಳುವ ವಿಶಾಲವಾಗಿ ನಿರ್ಮಿಸುವ ಪ್ರಕ್ರಿಯೆಯನ್ನು ರಾಷ್ಟ್ರ ನಿರ್ಮಾಣ ಎನ್ನುವರು. ಸ್ವಾಮಿ ವಿವೇಕಾನಂದರು ಕಬ್ಬಿಣದ ಮಾಂಸ ಖಂಡಗಳುಳ್ಳ, ಉಕ್ಕಿನ ನರ ಮಂಡಳಗಳುಳ್ಳ ಯಾರು ನನ್ನ ದೇಶ ದೇಶ ಎನ್ನುವ ಪರಿಕಲ್ಪನೆಯುಳ್ಳ ಯುವಕರು ಬೇಕು ಎಂದು ಹೇಳಿದ್ದಾರೆ. ದೇಶ ನನಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ ದೇಶಕ್ಕಾಗಿ ನಾನು ಏನು ಮಾಡಿದೆ ಎನ್ನುವುದು ಬಹಳ ಮುಖ್ಯವಾಗಿರುತ್ತದೆ. ಸ್ವಾಮಿ ವಿವೇಕಾನಂದರ ಆದರ್ಶ ಮೌಲ್ಯಗಳು ಇಂದಿನ ಯುವಕರಿಗೆ ಸ್ಫೂರ್ತಿದಾಯಕವಾಗಲಿ ಎಂದು ಹೇಳಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಸುಜಾತಾ ಮಾತನಾಡಿ ಇಂದಿನ ಯುವಕರು ಯಾವುದೇ ದುಃಶ್ಚಗಳಿಗೆ ಬಲಿಯಾಗದೆ ನಿಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿಕೊಲ್ಲಬೇಕೆಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸೇವಾ ಯೋಜನಾಧಿಕಾರಿಗಳಾದ ಮಾರಯ್ಯ ಆರೋಲಿ, ಶಾಂತ ಮೂರ್ತಿ ಪ್ರಾಚಾರ್ಯರು, ಉಪನ್ಯಾಸಕರಾದ ರವಿ ಸುಂಕನೂರು, ಹನುಮಂತ ಬೈಲ್ ಮರ್ಚೆಡ, ಹನುಮಂತ ಚಿಕ್ಕೊಟ್ನೆಕಲ್, ದೇವೇಂದ್ರಪ್ಪ, ಬಾಗಯ್ಯ ನಾಯಕ ಕರಡಿಗುಡ್ಡ ಹಾಗೂ ಶಿಬಿರಾರ್ಥಿಗಳು, ಊರಿನ ಮುಖಂಡರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಐಶ್ವರ್ಯ ನಿರೂಪಿಸಿದರು ಸೃಷ್ಟಿ ಸ್ವಾಗತಿಸಿದರು., ಗೀತಾ ವಂದಿಸಿದರು

# ಯುಗಾದಿ ಪ್ರಕೃತಿಯ ಹಬ್ಬ



**ಯು**ಗಾದಿ ಎಂದರೆ ಎಲ್ಲರಲ್ಲೂ ಸಂತೋಷ ತುಂಬುವ ಹಬ್ಬ. ಈ ಹಬ್ಬ ಭಾರತೀಯ ಸಾಂಸ್ಕೃತಿಕ ಹಾಗೂ ಐತಿಹಾಸಿಕ ಪರಂಪರೆಯಲ್ಲಿ ಹೊಸ ವರ್ಷದ ಆರಂಭ'ವೆಂದು ಪರಿಗಣಿಸಲಾಗಿದೆ. ಪ್ರಕೃತಿಯಲ್ಲಿಯೂ ಇದೇ ಸಮಯದಲ್ಲಿ ಹೊಸ ಚೈತನ್ಯ ಮೂಡುತ್ತದೆ.

ಬೆಳೆಗಾಗಿ ಬಿತ್ತನೆ ಆರಂಭವಾಗುತ್ತದೆ. ರೈತರು ಹೊಲಗಳನ್ನು ಉಳುಮೆ ಮಾಡಿ, ಮಳೆಯ ನಿರೀಕ್ಷೆಯಲ್ಲಿ ಆಕಾಶದ ಕಡೆ ನೋಡುತ್ತಿರುತ್ತಾರೆ. ಅಂಥ ಸಂದರ್ಭದಲ್ಲಿ ಯುಗಾದಿಯ ಮುಂಗಾರಿನ ಮಳೆಯಾಗಿ ಮಳೆರಾಯ ಸುರಿಯುತ್ತಾನೆ. ಆ ಮಳೆ ಹನಿಗಳು ಮಣ್ಣಿನ ಮೇಲೆ ಬೀಳುವಾಗ ಮೂಡುವ ಸುವಾಸನೆ ಅಬ್ಬಬ್ಬಾ ! ಆ ಪರಿಮಳವನ್ನು ಎಲ್ಲಿಯೂ ಹುಡುಕಿದರೂ ಸಿಗದು.

ಗಿಡಮರಗಳು ತಮ್ಮ ಹಳೆಯ ಎಲೆಗಳನ್ನು ಬಿಟ್ಟು ಹೊಸ ಚಿಗುರುಗಳನ್ನು ಹೊಮ್ಮಿಸುತ್ತವೆ. ಹೂವು, ಕಾಯಿ, ಬಳ್ಳಿಗಳಿಂದ ಪ್ರಕೃತಿ ಹಸಿರು ಹೊದಿಕೆಯಲ್ಲಿ ಮಿನುಗುತ್ತದೆ. ಈ ದೃಶ್ಯ ರೈತನ ಮನಸ್ಸಿಗೆ ಹೊಸ ಆಶೆ ಮತ್ತು ಸಂತೋಷವನ್ನು ನೀಡುತ್ತದೆ.

ಇಂದಿನ ದಿನಗಳಲ್ಲಿ ನಾವು ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವಕ್ಕೆ ಒಳಗಾಗಿ, ಕ್ಯಾಲೆಂಡರ್ ಬದಲಾವಣೆಯನ್ನು ಕೇಕ್ ಕಟ್ ಮಾಡಿ ಆಚರಿಸುತ್ತೇವೆ. ಆದರೆ ಅದು ಕೇವಲ ದಿನಾಂಕ ಬದಲಾವಣೆಯಷ್ಟೇ. ಯುಗಾದಿ ಮಾತ್ರ ಪ್ರಕೃತಿಯ ವಾತಾವರಣವನ್ನೇ ಬದಲಾಯಿಸುವ ಹಬ್ಬ. ಆದ್ದರಿಂದ ನಾವು ನಮ್ಮ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಪಾಲಿಸಿ, ಯುಗಾದಿಯನ್ನು ಸಾರ್ಥಕವಾಗಿ ಆಚರಿಸಬೇಕು.

ಓ ಬಳ್ಳಿಯೇ ಹೂ ಬಿಟ್ಟು ಹೇಳು,
ಓ ಗಿಡವೇ ಹಸಿರಾಗಿ ಹೇಳು,
ಓ ಮಾವಿನ ಮರವೇ ಕಾಯಿಯಾಗಿ ಹೇಳು,
ಸಮಸ್ತ ಜನತೆಗೆ ಪ್ರಕೃತಿಯ ಶುಭಾಶಯ ಹೇಳು.

ಯುಗಾದಿಯಂದು ಬೇವು–ಬೆಲ್ಲ ಸೇವಿಸುವುದಕ್ಕೆ ವಿಶೇಷ ಮಹತ್ವವಿದೆ. ಅದು ಜೀವನದ ಕಷ್ಟ–ಸುಖಗಳನ್ನು ಸಮಾನವಾಗಿ ಸ್ವೀಕರಿಸುವ ಸಂದೇಶವನ್ನು ನೀಡುತ್ತದೆ. ಹಿರಿಯರ ಮಾತಿನಂತೆ "ಬೇವು–ಬೆಲ್ಲ ತಿಂದು ಒಳ್ಳೆಯ ಮಾತಾಡಿ" ಎಂದು ಹಾರೈಸುವ ಈ ಹಬ್ಬ, ನಮ್ಮ ಜೀವನಕ್ಕೆ ಒಳ್ಳೆಯ ದಾರಿದೀಪವಾಗಿದೆ.

**–ಮೈಬೂಬಿ ಬುಳ್ಳಾಪುರ.**
**ವಿದ್ಯಾರ್ಥಿನಿ.**



## ಲೊಯೋಲ ಕಾಲೇಜಿನಲ್ಲಿ ಅಜೀಂ ಪ್ರೇಮ್ ಜಿ ಫೌಂಡೇಶನ್ ವತಿಯಿಂದ ಲಿಂಗಮೇಳ ಕಾರ್ಯಾಗಾರ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಲೊಯೋಲ ಕಾಲೇಜಿನಲ್ಲಿ ಅಜೀಂ ಪ್ರೇಮ್ ಜಿ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಲಾದ ಲಿಂಗಮೇಳ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಅಜೀಂ ಪ್ರೇಮ್ ಜಿ ಫೌಂಡೇಶನ್ ತಾಲ್ಲೂಕು ಸಂಯೋಜಕರಾದ ರಾಜೇಶ್ ಮಾತನಾಡಿ ಸಮಾಜದಲ್ಲಿ ಬೇರೂರಿರುವ ಲಿಂಗ ಆಧಾರಿತ ಭಾವನೆಗಳನ್ನು ತೊಲಗಿಸುವುದು ಅಗತ್ಯವಾಗಿದು ಶಿಕ್ಷಣ ಮತ್ತು ಸಂಸ್ಕಾರದ ಮೂಲಕ ಬಾಲ್ಯದಿಂದಲೇ ಮಕ್ಕಳಲ್ಲಿ ಸಮಾನತೆಯ ಅರಿವು ಮೂಡಿಸುವುದಕ್ಕಾಗಿ ಲಿಂಗತ್ವವು ಮನೆಯಿಂದಲೇ ಬೆಳೆದು ಬರಬೇಕಾಗಿದೆ ಪಾಲಕರು ಹೆಣ್ಣು ಮಕ್ಕಳು ಮನೆಯ ಕೆಲಸಕ್ಕೆ, ಗಂಡು ಮಕ್ಕಳು ಹೊರಗಿನ ದುಡಿಮೆಗೆ ಎನ್ನುವ ಹಳೆಯ ನಂಬಿಕೆಗಳನ್ನು ಬಿಟ್ಟು ತಮ್ಮ ಹೆಣ್ಣು ಮತ್ತು ಗಂಡು ಮಕ್ಕಳಿಬ್ಬರನ್ನು ಸಮಾನವಾಗಿ ಕಂಡು ಅವರಿಗೆ ಸಮಾನವಾಗಿ ಶಿಕ್ಷಣವನ್ನು ನೀಡಿದಲ್ಲಿ ಹೆಣ್ಣು ಮಕ್ಕಳು ಕೂಡ ಸಮಾಜದಲ್ಲಿ ಉನ್ನತಸ್ಥಾನವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಲೊಯೋಲ ಕಾಲೇಜಿನ ಪ್ರಾಂಶುಪಾಲರಾದ ಫಾ. ವಿನೋದ್ ಪೌಲ್ ಮಾತನಾಡಿ ಲಿಂಗ ಸಮಾನತೆಯು ಕೇವಲ ಕಾನೂನಿನಿಂದ ಬರುವುದಿಲ್ಲ, ಅದು ಪ್ರತಿಯೊಬ್ಬರ ಮನಸ್ಥಿತಿಯಿಂದ ಬರಬೇಕು. ಸಮಾಜದ ಕಣ್ಣಾಗಿರುವ ಮಹಿಳೆಯರು ಸಬಲರಾದಾಗ ಮಾತ್ರ ಇಡೀ ರಾಷ್ಟ್ರದ ಪ್ರಗತಿ ಸಾಧ್ಯವಾಗುತ್ತದೆ. ಇಂದಿನ ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ ಪದ್ಧತಿ, ವರದಕ್ಷಿಣೆ, ಭ್ರೂಣ ಹತ್ಯೆ ವಿರುದ್ಧ ಪ್ರತಿಯೊಬ್ಬರು ಕೂಡ ಧ್ವನಿ ಎತ್ತಿದಾಗ ಮಾತ್ರ ಸಮಾಜದಲ್ಲಿ ಬದಲಾವಣೆಯನ್ನು ತರುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾಲೇಜಿನ ವಿದ್ಯಾರ್ಥಿಗಳನ್ನು ತಂಡಗಳಾಗಿ ವಿಭಾಜಿಸಿ ಪ್ರತಿ ತಂಡಗಳಿಗೆ ಸಮಾನತೆ, ಸಮತೆ, ನ್ಯಾಯ ಹಾಗೂ ಘನತೆಯ ಪರಿಕಲ್ಪನೆ ವಿಷಯದ ಕುರಿತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು. ಲೊಯೋಲ ಕಾಲೇಜಿನ ಉಪಪ್ರಾಂಶುಪಾಲರಾದ ಖಾಸಿಂ ಸಾಬ್, ಅಜೀಂ ಪ್ರೇಮ್ ಜಿ ಫೌಂಡೇಶನ್ ಸಂಪನ್ಮೂಲ ವ್ಯಕ್ತಿಗಳಾದ ರಾಜ್ ಮಹಮ್ಮದ್, ಮೌನೇಶ, ಶ್ರುತಿ ,ಕಾವ್ಯ ಸೇರಿದಂತೆ ಕಾಲೇಜಿನ ಉಪನ್ಯಾಸಕರು ವಿದ್ಯಾರ್ಥಿಗಳು ಭಾಗವಹಿಸಿದರು.

## ಹೆಚ್ ಪಿ ವಿ ಲಸಿಕೆ... ಹೆಣ್ಣು ಮಕ್ಕಳ ಸುರಕ್ಷಿತತೆಗೆ



ಹ್ಯೂಮನ್ ಪ್ಯಾಪಿಲೋಮ ವೈರಸ್ ಲಸಿಕೆ ನೀಡುವ ಅಭಿಯಾನ ಕಳೆದ ಒಂದೆರಡು ವಾರಗಳಿಂದ ಭಾರತ ದೇಶದಾದ್ಯಂತ ಆರಂಭವಾಗಿದೆ. ಸುಮಾರು 90 ದಿನಗಳ ಕಾಲ ನಡೆಯುವ ಈ ಲಸಿಕಾ ಅಭಿಯಾನವು ಮುಂದಿನ ದಿನಮಾನಗಳಲ್ಲಿ ದೇಶದಿಂದ ಎಚ್ ಪಿ ವಿ ಸೋಂಕಿನಿಂದ ಉಂಟಾಗುವ ಗರ್ಭ ಕಂಠದ ಕ್ಯಾನ್ಸರ್ ಅನ್ನು ಹೊಡೆದಟ್ಟುವಲ್ಲಿ ಸಹಕಾರಿಯಾಗಿದೆ.

2024ರ ಜುಲೈ 2 ರಂದು ಸಂಸತ್ತಿನ ಅಧಿವೇಶನದಲ್ಲಿ ರಾಜ್ಯಸಭಾ ಸದಸ್ಯರಾಗಿ ನೇಮಕಗೊಂಡು ಕಾರ್ಯ ನಿರ್ವಹಿಸುತ್ತಿರುವ ನಮ್ಮ ಕರ್ನಾಟಕದ ಹೆಮ್ಮೆಯ ತಾಯಿ ಡಾಕ್ಟರ್ ಸುಧಾ ಮೂರ್ತಿ ಅವರು ಹೆಣ್ಣು ಮಕ್ಕಳು ತಮ್ಮ ಬದುಕಿನಲ್ಲಿ ಅನುಭವಿಸುವ ಹಲವಾರು ತೊಂದರೆಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಕೂಡ ಒಂದು. ಈಗಾಗಲೇ ಕಳೆದ ಎರಡು ಮೂರು ದಶಕಗಳಿಂದ ಪಶ್ಚಿಮ ದೇಶಗಳಲ್ಲಿ ಇದಕ್ಕೆ ಲಸಿಕೆಯನ್ನು ಕಂಡುಹಿಡಿದಿದ್ದು 9 ರಿಂದ 14 ವರ್ಷ ವಯಸ್ಸಿನ ಹೆಣ್ಣು ಮಕ್ಕಳಿಗೆ ಈ ಲಸಿಕೆಯನ್ನು ನೀಡುವ ಮೂಲಕ ಭವಿಷ್ಯದಲ್ಲಿ ಅವರಿಗೆ ಹ್ಯೂಮನ್ ಪ್ಯಾಪಿಲೋವಾ ವೈರಸ್ ಕಾರಣದಿಂದ ಉಂಟಾಗುವ ಗರ್ಭಕಂಠದ ಕ್ಯಾನ್ಸರ್ ಕಾಯಿಲೆ ಬರುವುದನ್ನು ಶೇಕಡಾ 95 ಪ್ರತಿಶತ ತಡೆಯಬಹುದು.... ಕಾರಣ ಸರ್ಕಾರ ಈ ನಿಟ್ಟಿನಲ್ಲಿ ದೇಶದ ಭವಿಷ್ಯದ ತಾಯಂದಿರಾಗುವ ಹೆಣ್ಣು ಮಕ್ಕಳಿಗೆ ?ಚ್ಪಿ ವಿ ವ್ಯಾಕ್ಸೀನ್ ಗಳನ್ನು ದೇಶದಾದ್ಯಂತ ಎಲ್ಲಾ 9 ರಿಂದ 14ರ ವಯಸ್ಸಿನ ಹೆಣ್ಣು ಮಕ್ಕಳಿಗೆ ಉಚಿತವಾಗಿ ನೀಡುವ ಮೂಲಕ ಕಾರ್ಯ ನಿರ್ವಹಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ದಶಕದ ಹಿಂದೆ ಈ ಹೆಚ ಪಿ ವಿ ವ್ಯಾಕ್ಸಿನ್ಗಳನ್ನು ತಮಿಳುನಾಡಿನಲ್ಲಿ ಮಡ್ ಅಡ್ಯಾರ್ ವೈದ್ಯಕೀಯ ಸಂಸ್ಥೆಯ ಸಹಯೋಗದಲ್ಲಿ ಅಂದಿನ ಡಾಕ್ಟರ್ ಕೆ ಶಾಂತ ಎಂಬವರ ನೇತೃತ್ವದಲ್ಲಿ ತಾವು ನೀಡಿರುವುದಾಗಿ ಸುಧಾ ಮೂರ್ತಿಯವರು ಹೇಳಿ ಅತ್ಯುತ್ತಮ ಫಲಿತಾಂಶವನ್ನು ಹೊಂದಿರುವ ಈ ವ್ಯಾಕ್ಸಿನೇಷನ್ ಹೆಣ್ಣು ಮಕ್ಕಳ ಭವಿಷ್ಯದ ಬದುಕಿಗೆ ಆಸರೆಯಾಗಬಲ್ಲದು ಎಂಬುದನ್ನು ಒತ್ತಿ ಹೇಳಿದ್ದರು.

ಅಂದಿನ ಸಭಾಪತಿಗಳು ಕೂಡಲೇ ಈ ವಿಷಯವನ್ನು ಆರೋಗ್ಯ ಸಚಿವರ ಕಾರ್ಯಾಲಯಕ್ಕೆ ಕಳುಹಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು. ಅದರ ಪರಿಣಾಮವಾಗಿ ಇಂದು ದೇಶದಾದ್ಯಂತ 14 ವರ್ಷ ವಯಸ್ಸಿನ ಹೆಣ್ಣುಮಕ್ಕಳಿಗೆ ಹೆಚ್ ಪಿ ವಿ ಲಸಿಕೆಯನ್ನು ಹಾಕುವ ಅಭಿಯಾನವನ್ನು ಕಳೆದ ಫೆಬ್ರುವರಿ ಕೊನೆಯ ವಾರದಿಂದ ಆರಂಭಿಸಲಾಗಿದೆ.

ಇಡೀ ಭಾರತ ದೇಶದಾದ್ಯಂತ ಸುಮಾರು ಮೂರು ತಿಂಗಳುಗಳ ಕಾಲ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಲಸಿಕೆಯನ್ನು 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ನೀಡಲಾಗುತ್ತದೆ.

ಜನನಾಂಗದ ಶುಚಿತ್ವ, ಸೋಂಕು, ಹುಣ್ಣು ಮತ್ತು ಅಸುರಕ್ಷಿತ ಲೈಂಗಿಕ ಸಂಪರ್ಕದ ಪರಿಣಾಮವಾಗಿ ಹೆಚ್ ಪಿ ವಿ ಸೋಂಕು ಉಂಟಾಗಿ ಅದು ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ಮುಂದೆ ಗರ್ಭಕಂಠದ ಕ್ಯಾನ್ಸರ್ ಆಗಿ ಮಾರ್ಪಾಡಾಗುವ ಗಂಭೀರ ಸ್ವರೂಪವನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ ಲಸಿಕೆಯನ್ನು ನೀಡಲಾಗುತ್ತಿದೆ.

ಭಾರತ ದೇಶದಲ್ಲಿ ಪ್ರತಿ ವರ್ಷ ಸರಿ ಸುಮಾರು 80 ಸಾವಿರ ಹೆಣ್ಣು ಮಕ್ಕಳು ಗರ್ಭಕಂಠದ ಕ್ಯಾನ್ಸರ್ ನಿಂದ ಮರಣ ಹೊಂದುತ್ತಾರೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಚ್ ಪಿ ವಿ ಲಸಿಕೆಯು ಒಂದು ಡೋಸ್ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಹಾಗೂ ರೋಗ ಪ್ರತಿಬಂಧಕ ಔಷಧಿಯಾಗಿ ಕಾರ್ಯನಿರ್ವಹಿಸುತ್ತದೆ. ಕೇಂದ್ರ ಸರ್ಕಾರವು ಕೈಗೊಂಡಿರುವ ಈ ಕಾರ್ಯಕ್ರಮದ ಮೂಲಕ ದೇಶದಾದ್ಯಂತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಾಲೂಕು ಸರ್ಕಾರಿ ಆಸ್ಪತ್ರೆಗಳ ಸಹಯೋಗದಲ್ಲಿ ಈ ಲಸಿಕೆಯನ್ನು ನೀಡಲಾಗುತ್ತಿದೆ.

ಎಲ್ಲಾ ಪಾಲಕರಿಗೆ ತಮ್ಮ 14 ವರ್ಷದ ಹೆಣ್ಣು ಮಕ್ಕಳ ಜನನ ಪ್ರಮಾಣ ಪತ್ರದೊಂದಿಗೆ ಬಂದು ಅವರಿಗೆ ಲಸಿಕೆ ಹಾಕಿಸಲು ಕೋರಿಕೊಳ್ಳಲಾಗಿದ್ದು ಲಸಿಕೆ ಹಾಕಿಸಿಕೊಳ್ಳಲು ಬರುವ ಹೆಣ್ಣು ಮಕ್ಕಳು ಆಹಾರವನ್ನು ಕಡ್ಡಾಯವಾಗಿ ಸೇವಿಸಿರಲೇಬೇಕು ಎಂದು ನಿರ್ದೇಶನ ನೀಡಲಾಗಿದೆ.

ಪ್ರತಿ ವರ್ಷವೂ ದೇಶದಾದ್ಯಂತ ಸುಮಾರು 1.15 ಕೋಟಿ ಹೆಣ್ಣು ಮಕ್ಕಳಿಗೆ ಈ ಲಸಿಕೆಯನ್ನು ನೀಡುವ ಮೂಲಕ ಅವರ ಆರೋಗ್ಯಕರ ಬದುಕಿನ ಭರವಸೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

ಹೆಣ್ಣು ಮಕ್ಕಳ ಭವಿಷ್ಯದ ಬದುಕಿಗೆ ಕ್ರಾಂತಿಕಾರಕ ತಿರುವನ್ನು ನೀಡಲಿರುವ ಹೆಚ್ ಪಿ ವಿ ಲಸಿಕೆ ಅಭಿಯಾನವು ತನ್ನ ಉದ್ದೇಶಿತ ಗುರಿಯನ್ನು ತಲುಪುವ ಮೂಲಕ ಯಶಸ್ವಿಯಾಗಲಿ ಎಂದು ಆಶಿಸುವ

**–ವೀಣಾ ಹೇಮಂತ್ ಗೌಡ ಪಾಟೀಲ್ ಮುಂಡರಗಿ ಗದಗ್**




## ಕೆ.ಎಸ್.ಎನ್. ಸಾಮಾಜಿಕ ಸೇವಾ ಸಮಿತಿವತಿಯಿಂದ ರಂಜಾನ್ ಇಫ್ತಾಯರ್ ಕೂಟಕ್ಕೆ ಹಣ್ಣುಗಳ ವಿತರಣೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ವಿವಿಧ ಮಸೀದಿಗಳಲ್ಲಿ ಕೆ.ಶಿವನಗೌಡನಾಯಕ ಸಾಮಾಜಿಕ ಸೇವಾ ಸಮಿತಿವತಿಯಿಂದ ರಂಜಾನ್ ಇಫ್ತಿಯಾರ್ ಕೂಟದ ಅಂಗವಾಗಿ ಹಣ್ಣುಗಳನ್ನು ವಿತರಿಸಲಾಯಿತು.

ಕೆ.ಶಿವನಗೌಡನಾಯಕ ಸಾಮಾಜಿಕ ಸೇವಾ ಸಮಿತಿ ಹಾಗೂ ಟಿ.ಎ.ಪಿ.ಸಿ.ಎಂ.ಎಸ್.ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವತಿ, ಮಲ್ಲಿಕಾರ್ಜುನಜಕ್ಕಲದಿನ್ನಿ, ವೀರೇಶನಾಯಕಬೆಟ್ಟದೂರು, ಕೆ.ನಾಗಲಿಂಗಸ್ವಾಮಿ, ಉಮಾಕಾಂತ್ ಸಾಹುಕಾರ, ಮೌಲಸಾಬ ಗಣದಿನ್ನಿ, ನವೀನ್ ಕುಮಾರ್, ಚಂದ್ರು ನಾಯಕ್ , ವೆಂಕಟೇಶ್, ಕರೀಂ ಪಟೇಲ್, ಶರಣಬಸವ ನಾಯಕ್ ಜಾನೇಕಲ್ ಸೇರಿದಂತೆ ಇನ್ನಿತರರು ಇದ್ದರು

# ಒಳಮೀಸಲಾತಿ ಅನ್ಯಾಯ ವಿರೋಧಿಸಿ ಮುಖ್ಯಮಂತ್ರಿಗೆ ಮನವಿ: ಬಲಗೈ ಸಮುದಾಯಗಳ ಆಗ್ರಹ

**ಬೀದರ:ಮಾ.18:**ಪರಿಶಿಷ್ಟ ಜಾತಿಯ ಬಲಗೈ ಸಮುದಾಯಗಳಿಗೆ ಆಗುತ್ತಿರುವ ಅನ್ಯಾಯಗಳನ್ನು ಸರಿಪಡಿಸುವಂತೆ ಆಗ್ರಹಿಸಿ, ಬಲಗೈ ಸಮುದಾಯಗಳ ಒಳಮೀಸಲಾತಿ ಹೋರಾಟ ಸಮಿತಿ, ಬೀದರ ವತಿಯಿಂದ ಇಂದು ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ನ್ಯಾಯಮೂರ್ತಿ ನಾಗಮೋಹನ ದಾಸ್ ಅವರು 04-08-2025ರಂದು ಸಲ್ಲಿಸಿರುವ ವರದಿ ಅವೈಜ್ಞಾನಿಕ ಹಾಗೂ ದೋಷಪೂರಿತವಾಗಿದ್ದು, ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ಸಲ್ಲಿಸಲಾಗಿದೆ ಎಂದು ಸಮಿತಿ ಆರೋಪಿಸಿದೆ. ಈ ವರದಿಯ ಆಧಾರದ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳಿಂದ ಬಲಗೈ ಸಮುದಾಯಗಳಿಗೆ ಅನ್ಯಾಯವಾಗುತ್ತಿದೆ ಎಂದು ತಿಳಿಸಿದೆ.
ಜೇಷ್ಠತಾ ಸಂರಕ್ಷಣಾ ಕಾಯ್ದೆ ಜಾರಿಯಲ್ಲಿದ್ದರೂ, ವಿವಿಧ ಇಲಾಖೆಗಳು ಬಡ್ತಿ ಮೀಸಲಾತಿಯಲ್ಲಿ ವಂಚನೆ ಮಾಡುತ್ತಿರುವುದನ್ನು ಸಮಿತಿ ಖಂಡಿಸಿದೆ. ಒಳಮೀಸಲಾತಿ ಹಾಗೂ ರೋಸ್ಟರ್ ಬಿಂದುಗಳ ನಿಗದಿಯಲ್ಲಿ ಅನೇಕ ಗೊಂದಲಗಳಿದ್ದು, ಅವುಗಳನ್ನು ತಕ್ಷಣ ಸರಿಪಡಿಸಬೇಕು ಎಂದು ಒತ್ತಾಯಿಸಿದೆ.

ಸರ್ಕಾರದ ವಿವಿಧ ಆದೇಶಗಳಲ್ಲಿ ಮೀಸಲಾತಿ ರೋಸ್ಟರ್ ಬಿಂದುಗಳನ್ನು ಅವೈಜ್ಞಾನಿಕವಾಗಿ ನಿಗದಿಪಡಿಸಿರುವುದನ್ನು ಪರಿಷ್ಕರಿಸುವುದು, ಹಳೆಯ ನಿಯಮಾವಳಿಗಳನ್ನು ಅನುಸರಿಸಿ ಹೊಸ ರೋಸ್ಟರ್ ವ್ಯವಸ್ಥೆ ಜಾರಿಗೆ ತರುವುದು, ಜೇಷ್ಠತಾ ಸಂರಕ್ಷಣಾ ಕಾಯ್ದೆ ಜಾರಿಗೊಳಿಸದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ಬ್ಯಾಕ್‌ಲಾಗ್ ಹುದ್ದೆಗಳನ್ನು ಒಂದೇ ಬಾರಿ ಮುಂಬಡ್ತಿ ಮೂಲಕ ಭರ್ತಿ ಮಾಡುವುದು, ತಪ್ಪು ಸ್ಪಷ್ಟೀಕರಣ ನೀಡಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವುದು ಹಾಗೂ ವಿವಿಧ ಇಲಾಖೆಗಳು ನೀಡಿರುವ ಗೊಂದಲಮಯ ಅಭಿಪ್ರಾಯಗಳನ್ನು ಹಿಂಪಡೆಯುವಂತೆ ಸಮಿತಿ ಆಗ್ರಹಿಸಿದೆ.



ಒಳಮೀಸಲಾತಿ ಗೊಂದಲಗಳು ಪರಿಹಾರವಾಗುವ ತನಕ ಪ್ರಸ್ತುತ ಮೀಸಲಾತಿ ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ, ಹಳೆಯ ಮೀಸಲಾತಿ ವ್ಯವಸ್ಥೆಯನ್ನೇ ಮುಂದುವರಿಸಲು ಮನವಿಯಲ್ಲಿ ಸೂಚಿಸಲಾಗಿದೆ.

**ಹಕ್ಕೊತ್ತಾಯಗಳು:**
ಸಮಿತಿ ತಮ್ಮ ಮನವಿಯಲ್ಲಿ ಕೆಲವು ಪ್ರಮುಖ ಹಕ್ಕೊತ್ತಾಯಗಳನ್ನು ಮುಂದಿಟ್ಟಿದ್ದು, ಅವುಗಳಲ್ಲಿ ಮುಖ್ಯವಾಗಿ–
ಒಳಮೀಸಲಾತಿ ವರದಿ ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯುವ ತನಕ ಶೈಕ್ಷಣಿಕ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಜಾರಿಯಲ್ಲಿರುವ ಒಳಮೀಸಲಾತಿ ಕ್ರಮಗಳಿಗೆ ತಕ್ಷಣ ತಡೆಯಾಜ್ಞೆ ನೀಡಬೇಕು.
ಹೊಸ ಜಾತಿ ಪ್ರಮಾಣ ಪತ್ರ ವಿತರಿಸುವುದನ್ನು ತುರ್ತಾಗಿ ನಿಲ್ಲಿಸಿ, ಹಳೆಯ ಪ್ರಮಾಣ ಪತ್ರವನ್ನೇ ಮುಂದುವರಿಸಬೇಕು.
ಒಳಮೀಸಲಾತಿಗೆ ಅನ್ವಯಿಸಿರುವ ರೋಸ್ಟರ್ ಬಿಂದುಗಳನ್ನು ಪರಿಷ್ಕರಿಸಿ ಸರಿಪಡಿಸಬೇಕು.
ಗೊಂದಲಗಳು ನಿವಾರಣೆಯಾಗುವವರೆಗೆ ಹಳೆಯ ಮೀಸಲಾತಿಯನ್ನೇ ಅನುಸರಿಸಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು.
ಮಾರ್ಚ್ 27 ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಕುರಿತು ತೆಗೆದುಕೊಳ್ಳುವ ತೀರ್ಮಾನದಲ್ಲಿ ಬಲಗೈ ಸಮುದಾಯಗಳಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು.

ಈ ಸಂದರ್ಭದಲ್ಲಿ ಬಲಗೈ ಸಮುದಾಯಗಳ ಒಳಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷ ಮಹೇಶ ಗೋರನಾಳಕರ್, ಕಾರ್ಯಕಾರಿ ಸಮಿತಿ ಸದಸ್ಯರಾದ ಪ್ರಕಾಶ ರಾವಣ, ಪ್ರದೀಪ ನಾಟೇಕರ್, ಪವನ ಮಿಠಾರೆ, ರಾಹುಲ್ ಡಾಂಗೆ, ಭೀಮರಾವ ಮಾಲಗತ್ತಿ, ಸೂರ್ಯಕಾಂತ ಸಾದುರೆ, ವಿನೋದ ಬಂದಗೆ, ಸಂಜುಕುಮಾರ ಸಾಗರ ಹಾಗೂ ಅರುಣ ಪಟೇಲ್ ಉಪಸ್ಥಿತರಿದ್ದರು.

ಇದೇ ವೇಳೆ ಸಮಿತಿಯ ಸಲಹೆಗಾರರಾದ ಮಾರುತಿ ಬೌದ್ಧೆ, ಬಾಬುರಾವ ಪಾಸ್ವಾನ್, ಅನೀಲಕುಮಾರ ಬೆಲ್ದಾರ್, ಶ್ರೀಪತರಾವ ದೀನೆ, ಕಲ್ಯಾಣರಾವ ಭೋಸ್ಲೆ, ರಾಜಕುಮಾರ ಮೂಲಭಾರತಿ, ಶಿವಕುಮಾರ ನೀಲಿಕಟ್ಟಿ, ವಿಠಲದಾಸ ಪ್ಯಾಗೆ, ಕಪಿಲ ಗೊಡಬೊಲೆ, ವಿನೋದ ಅಪ್ಪೆ, ಬಾಬುರಾವ ಟೈಗರ್ (ಹುಮನಾಬಾದ), ವಿನಯಕುಮಾರ ಮಾಳಗೆ, ರಾಜಕುಮಾರ ಸಿಂಧೆ (ಬೀದರ ದಕ್ಷಿಣ), ಪ್ರವೀಣ ಕರಂಜಿ (ಔರಾದ), ರಾಜಕುಮಾರ ಮೋರೆ (ಭಾಲ್ಕಿ) ಹಾಗೂ ಪ್ರಕಾಶ ಸುಲ್ತಾನೆ (ಬಸವಕಲ್ಯಾಣ) ಭಾಗವಹಿಸಿದ್ದರು.

ಪ್ರಮುಖರಾದ ಪ್ರಮೋದ ಶಿಂದೆ, ಉದಯ ನಾಯಕ, ಸಂದೀಪ್ ಕಾಂಟೆ, ಮುಖೇಶ ರಾಯ್, ಲಕ್ಷ್ಮಣ ಕಾಂಬಳೆ, ಸಂಜುಕುಮಾರ ಮೇತ್ರೆ, ಸುನೀಲ ಸಂಗಮ್, ಗಂಜೇಂದ್ರ ಕನಕಟಕರ್, ಮಲ್ಲಿಕಾರ್ಜುನ ಮಹೇಂದ್ರಕುಮಾರ, ಸಂಜುಕುಮಾರ ಭಾವಿಕಟ್ಟಿ, ಮಲ್ಲಿಕಾರ್ಜುನ ಮಾಲೆ, ಮಲ್ಲಿಕಾರ್ಜುನ ಮೊಳಕೆರೆ, ಪ್ರೇಮ ಬುಡಕೆ, ಗಂಗಮ್ಮಾ ಫುಲೆ, ಸುಧಾಮಣಿ ಗುಪ್ತಾ, ರಂಜೀತಾ ಜೈನೋರ್ ಹಾಗೂ ಉಷಾಬಾಯಿ ಬನ್ಸೂಡೆ ಸೇರಿದಂತೆ ಸಾವಿರಾರು ಜನರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಸರಕಾರಿ ಹುದ್ದೆಗಳ ನೇಮಕಾತಿಗೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

**ವಿಜಯಪುರ, ಮಾ. 18:** ಕರ್ನಾಟಕ ರಾಜ್ಯದಲ್ಲಿ ಸರಕಾರಿ ಹುದ್ದೆಗಳ ನೇಮಕಾತಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳನ್ನು ಸರಿಪಡಿಸುವಂತೆ ಆಗ್ರಹಿಸಿ ನಗರದಲ್ಲಿ ಎಬಿವಿಪಿ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.
ಮನವಿ ಸ್ವೀಕರಿಸಲು ಡಿ.ಸಿ. ತಡ ಮಾಡಿದ್ದಕ್ಕೆ ಜಿಲ್ಲಾಧಿಕಾರಿಗಳ ಕಚೇರಿಗೆ ನುಗ್ಗಲು ವಿದ್ಯಾರ್ಥಿಗಳು ವಿಫಲ ಯತ್ನ ಮಾಡಿದರು.
ನಂತರ ಆಗಮಿಸಿದ ಜಿಲ್ಲಾಧಿಕಾರಿಗಳು ಮನವಿ ಸ್ವೀಕರಿಸಿದರು.
ಈ ಸಂದರ್ಭದಲ್ಲಿ ಎಬಿವಿಪಿಯ ಕೇಂದ್ರೀಯ ಕಾರ್ಯ ಸಮಿತಿ ಸದಸ್ಯರಾದ ಸಚಿನ ಕುಳಗೇರಿ ಮಾತನಾಡಿ, ರಾಜ್ಯದಲ್ಲಿ ಕಳೆದ 5-6 ವರ್ಷಗಳಿಂದ ವಿದ್ಯಾರ್ಥಿಗಳ ಪರಿಸ್ಥಿತಿ ಶೋಚನೀಯವಾಗಿದೆ. ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸಿ ವಿದ್ಯಾರ್ಥಿಗಳ ಜೊತೆಗೆ ನಿಲ್ಲಬೇಕಾದ ಸರ್ಕಾರ ಕುಂಭನಿದ್ರೆಗೆ ಜಾರಿದೆ. ಸರಕಾರದ ಹತ್ತಿರ ಯಾವುದೇ ದೂರದೃಷ್ಟಿಯ ಯೋಜನೆಗಳು ಇಲ್ಲದೆ ಸಮಸ್ಯೆಗಳು ಬಂದಾಗ ಅವುಗಳಿಗೆ ತೇಪೆ ಹಚ್ಚುವ ಕಾರ್ಯ ನಡೆಯುತ್ತಿದೆ.
ಕರ್ನಾಟಕ ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳ ನೇಮಕಾತಿಯನ್ನು ಮಾಡಿಕೊಳ್ಳುತ್ತೇವೆ ಎಂದು ಪ್ರಣಾಳಿಕೆಯಲ್ಲಿ ಅಧಿಕಾರಕ್ಕೆ ಬಂದ ಸರ್ಕಾರ, ಕಳೆದ ಮೂರು ವರ್ಷಗಳಿಂದ ಯಾವುದೇ ನೇಮಕಾತಿಗಳನ್ನು ಮಾಡದೆ ವಿದ್ಯಾರ್ಥಿಗಳಿಗೆ ಮೋಸ ಮಾಡಿದೆ. ರಾಜ್ಯದಲ್ಲಿ ಒಟ್ಟು 43 ಇಲಾಖೆಗಳಲ್ಲಿ 284, 881 ಹುದ್ದೆಗಳು ಖಾಲಿ ಇವೆ. ಲಕ್ಷಾಂತರ ಅಭ್ಯರ್ಥಿಗಳು ಕಳೆದ ಐದಾರು ವರ್ಷಗಳಿಂದ ಸರ್ಕಾರ ನೇಮಕಾತಿಗಳನ್ನು ಮಾಡುತ್ತೇವೆ ಎಂಬ ನಂಬಿಕೆಯೊಂದಿಗೆ ಪ್ರತಿ ತಿಂಗಳು ಹಣವನ್ನು ಖರ್ಚು ಮಾಡಿಕೊಂಡು ತರಬೇತಿಯನ್ನು ಪಡೆಯುತ್ತಾ ಸರಕಾರಿ ಸೇವೆಯನ್ನು ಮಾಡಬೇಕು ಎಂಬ ಆಸೆಯನ್ನು ಇಟ್ಟುಕೊಂಡು ಅಧ್ಯಯನ ಮಾಡುತ್ತಿದ್ದಾರೆ. ಆದರೆ ಅಂತಹ ಸಾವಿರಾರು ಅಭ್ಯರ್ಥಿಗಳ ವಯಸ್ಸು ಕೂಡಾ ಮೀರುತ್ತಿದೆ. ಆದರೆ ಸರಕಾರಕ್ಕೆ ಈ ಯಾವುದೇ ತೊಂದರೆಗಳನ್ನು ಗಮನಿಸದೆ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ



ಜೀವನದ ಜೊತೆ ಚೆಲ್ಲಾಟವಾಡುತ್ತಿದೆ ಎಂದರು.
ಎಬಿವಿಪಿಯ ಜಿಲ್ಲಾ ಸಂಚಾಲಕ ಸಂದೀಪ ಅರಳಗುಂಡಿ ಮಾತನಾಡಿ, ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದಂತಹ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ 79,694 ಹುದ್ದೆಗಳು, ಉನ್ನತ ಶಿಕ್ಷಣ ಇಲಾಖೆಯಲ್ಲೂ 13,599 ಹುದ್ದೆಗಳು ಖಾಲಿ ಇದ್ದು, ಇದರಿಂದ ರಾಜ್ಯದ ವಿದ್ಯಾರ್ಥಿಗಳ ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತದೆ. ಸರಿಯಾಗಿ ತರಗತಿಗಳು ನಡೆಯುತ್ತಿಲ್ಲ. ಸರ್ವರಿಗೂ ಶಿಕ್ಷಣವನ್ನು ನೀಡಬೇಕಾದದ್ದು ಸರಕಾರಗಳ ಕರ್ತವ್ಯ. ಆದರೆ ಸರಕಾರಿ ಶಾಲಾ, ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳ ಸರಕಾರ ಅನ್ಯಾಯ ಮಾಡುತ್ತಿದೆ ಎಂದರು.
ಎಬಿವಿಪಿಯ ಕಾನೂನು ವಿದ್ಯಾರ್ಥಿಗಳ ಪ್ರಮುಖ ಮಂಜುನಾಥ ಹಳ್ಳಿ ಮಾತನಾಡಿ, ರಾಜ್ಯದ ವಿಶ್ವವಿದ್ಯಾಲಯಗಳ ಸ್ಥಿತಿಗತಿ ಶೋಚನೀಯವಾಗಿದೆ. ಕರ್ನಾಟಕ ರಾಜ್ಯದ ವಿಶ್ವವಿದ್ಯಾಲಯಗಳ ಸ್ಥಿತಿಗತಿ ಶೋಚನೀಯವಾಗಿದೆ. ಕರ್ನಾಟಕ ರಾಜ್ಯ ಮೊದಲು ಉನ್ನತ ಶಿಕ್ಷಣಕ್ಕೆ ಹೆಸರುವಾಸಿ ಆದ ರಾಜ್ಯ, ಪ್ರತಿಷ್ಠಿತ ವಿವಿಗಳು ಸಾವಿರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ ಅವರ ಜೀವನವನ್ನು ರೂಪಿಸಿಕೊಳ್ಳಲು ಸಹಕಾರಿಯಾಗಿವೆ. ಆದರೆ ಇತ್ತೀಚಿನ ದಿನಗಳಲ್ಲಿ ರಾಜ್ಯದ ವಿವಿಗಳನ್ನು ಸರಕಾರ ಕಡೆಗಣಿಸಿದೆ. ವಿವಿಗಳಿಗೆ ಯಾವುದೇ ಅನುದಾನ ನೀಡದೇ ಅವುಗಳನ್ನು ಕೇವಲ ವಿದ್ಯಾರ್ಥಿಗಳ ಶುಲ್ಕದ ಮೇಲೆ ನಡೆಸುವಂತೆ ಮಾಡುತ್ತಿದೆ. ಇದರಿಂದ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳ ಮೇಲೆ ಹಲವಾರು ಶುಲ್ಕಗಳನ್ನು ಹೇರುತ್ತಿದೆ. ಹಿಂದಿನ ಸರ್ಕಾರ ಸ್ಥಾಪಿಸಿದ 09 ವಿಶ್ವ ವಿದ್ಯಾಲಯಗಳು ಮುಚ್ಚುವ ಸ್ಥಿತಿಯನ್ನು ಸರಕಾರ ನಿರ್ಮಾಣ ಮಾಡುತ್ತಿದೆ. ಖಾಯಂ ಹುದ್ದೆಗಳ ನೇಮಕಾತಿ ಇಲ್ಲದ ಕಾರಣ ಸಕಾಲಕ್ಕೆ ಅಂಕಪಟ್ಟಿ, ಫಲಿತಾಂಶ ಹಾಗೂ ಇನ್ನಿತರ ಸಮಸ್ಯೆಗಳನ್ನು ವಿದ್ಯಾರ್ಥಿಗಳು ಅನುಭವಿಸುವಂತಾಗಿದೆ. ವಿದ್ಯಾರ್ಥಿ ವೇತನ, ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲವಾಗಲಿ ಎಂಬ ದೃಷ್ಟಿಯಿಂದ ವಿದ್ಯಾರ್ಥಿ ವೇತನವನ್ನು ನೀಡುವ ಯೋಜನೆಯನ್ನು ಸರಕಾರ ಪ್ರಾರಂಭ ಮಾಡಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಸರಕಾರ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ವಿದ್ಯಾರ್ಥಿ ವೇತನವನ್ನು ತಲುಪಿಸುತ್ತಿಲ್ಲ. ಇದರಿಂದ ವಿದ್ಯಾರ್ಥಿಗಳ ಶಿಕ್ಷಣದ ಮೇಲೆ ಹೊಡೆತ ಬೀಳುತ್ತಿದೆ ಎಂದರು.

ಈ ಸಂದರ್ಭದಲ್ಲಿ ಎಬಿವಿಪಿಯ ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷ ನಾಯಕ, ಶಶಿಕಾಂತ ರಾಕ್ಲೆ, ಚೇತನ ಕೋರವಾರ, ದುಂಡಪ್ಪ ನಿಲೋಗಿ, ಬಾಲಾಜಿ ಬಿರಾದಾರ, ಬಸನಗೌಡ ಕೋನರಡ್ಡಿ, ಕಾರ್ತಿಕ ಬಿರಾದಾರ, ಅಜಯ, ಶಿಲ್ಪಾ ಪೂಜಾರಿ, ನಿಖಿತಾ ರೂಡಿ, ಅಜಯ ಸೋಲಂಕಿ, ಶಶಿಕುಮಾರ ಪಾಟೀಲ, ಸಾಯಿ ಬಿರಾದಾರ ಇತರರು ಭಾಗವಹಿಸಿದ್ದರು.

# ವೈದ್ಯಕೀಯ ವೃತ್ತಿಯಲ್ಲಿ ಪ್ರಾಕ್ಟೀಸ್ ಮಾಡಲು ನ್ಯಾಯ ಸಮ್ಮತ ಅಂಶಗಳ ಕಡೆಗೆ ಗಮನವಿರಲಿ:ಡಾ. ಅರುಣ ಇನಾಮದಾರ



**ವಿಜಯಪುರ, ಮಾ. 18:** ವೈದ್ಯಕೀಯ ವೃತ್ತಿಯಲ್ಲಿ ಪ್ರಾಕ್ಟಿಸ್ ಮಾಡಲು ನ್ಯಾಯಸಮ್ಮತ ಅಂಶಗಳನ್ನು ಗಮದಲ್ಲಿಡಬೇಕು ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಕುಲಪತಿ ಡಾ. ಅರುಣ ಚಂ. ಇನಾಮದಾರ ಹೇಳಿದ್ದಾರೆ.
ಶುಕ್ರವಾರ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕಾನೂನು ಶಾಲೆಯಲ್ಲಿ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣೆ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಲಾದ ವೈದ್ಯಕೀಯ ನಿರ್ಲಕ್ಷ್ಯಕ್ಕೆ ಸಂಬಂಧಿಸಿದ ಕಾನೂನು ವಿಷಯದ ಕುರಿತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಮಾತನಾಡಿದರು.

ವೈದ್ಯಕೀಯ ವೃತ್ತಿಯಲ್ಲಿ ನ್ಯಾಯಸಮ್ಮತವಾಗಿ ಪ್ರಾಕ್ಟೀಸ ಮಾಡಲು ಐದು ಪ್ರಮುಖ ನ್ಯಾಯಾಂಗ ಕೇಸುಗಳನ್ನು ಅವರು ಉದಾಹರಣೆಯಾಗಿ ನೀಡಿದರು. ಗ್ರಾಹಕರ ಹಕ್ಕುಗಳು ಸಂಬಂಧ ಭಾರತೀಯ ವೈದ್ಯಕೀಯ ಸಂಘ ವಿರುದ್ಧ ಶಾಂತಾ ಕೇಸ್, ಕ್ರಿಮಿನಲ್ ನಿರ್ಲಕ್ಷ್ಯ ಮಾನದಂಡ ಸಂಬಂಧ ಜಾಕೋಬ್ ಮ್ಯಾಥ್ಯೂ ಪ್ರಕರಣ, ಮಾಹಿತಿಯುಕ್ತ ಒಪ್ಪಿಗೆಕ್ಕೆ ಪೂರಕವಾಗಿ ಸಮಿರಾ ಕೊಹ್ಲಿ ಪ್ರಕರಣ, ಅವಧಿಯ ನಂತರದ ಆರೈಕೆ ಮತ್ತು ದಯಾಮರಣದ ಬಗ್ಗೆ ಇರುವ ಅರುಣಾ ಶಾನ್‌ಬಾಗ್ ಪ್ರಕರಣ ಹಾಗೂ ಪರಿಹಾರ ಮತ್ತು ಹೊಣೆಗಾರಿಕೆ ಬಗ್ಗೆ ಇರುವ ಕುನಾಲ್ ಸಹಾ ಪ್ರಕರಣಗಳ ಕುರಿತು ಅವರು ಸೂಕ್ತ ವಿವರಣೆ ನೀಡಿದರು. ಅಲ್ಲದೇ, ಇವುಗಳನ್ನು ಗಮನದಲ್ಲಿಟ್ಟುಕೊಂಡು ವೈದ್ಯರು ಸೇವೆ ಮಾಡಬೇಕು ಎಂದು ಹೇಳಿದರು. ವಿವರಿಸಿದರು.
ಬೆಂಗಳೂರಿನ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣೆ ಸಂಸ್ಥೆಯ ನಿರ್ದೇಶಕ ಪ್ರೊ. ಸಿ. ಎಸ್. ಪಾಟೀಲ ಮಾತನಾಡಿ, ವೈದ್ಯಕೀಯ ವೃತ್ತಿ ಒಂದು ಶ್ರೇಷ್ಠ ವೃತ್ತಿಯಾಗಬೇಕೇ ಹೊರತು ಅದು ಒಂದು ವ್ಯವಹಾರವಾಗಬಾರದು. ಕಾನೂನಿನ ಅರಿವು ಹೊಂದಿರಬೇಕು ಎಂದು ಹೇಳಿದರು.

ಸಂಶೋಧನೆ ವಿಭಾಗದ ಮುಖ್ಯಸ್ಥ ಡಾ. ರೇವಯ್ಯ ಒಡೆಯರ ಪ್ರಾಸ್ತಾವಿಕವಾಗಿ ಮಾತನಾಡಿ, 2005 ರಲ್ಲಿ ಪ್ರಾರಂಭವಾದ ಕಾನೂನು ಮತ್ತು ಸಂಸದೀಯ ಸುಧಾರಣೆ ಸಂಸ್ಥೆ ಕಾನೂನಿನಲ್ಲಿ ಹೊಸಹೊಸ ಆವಿಷ್ಕಾರಗಳು ಹಾಗೂ ಅನ್ವೇಷಣೆಯನ್ನು ಮಾಡುತ್ತಾ ಬಂದಿದೆ ಎಂದು ತಿಳಿಸಿದರು.
ಬಳ್ಳಾರಿ ಕರ್ನಾಟಕ ಮೆಡಿಕಲ್ ಕೌನ್ಸಿಲ್ ಅಧ್ಯಕ್ಷ ಡಾ. ಯೋಗಾನಂದ ರೆಡ್ಡಿ ವೈ ಸಿ ಮಾತನಾಡಿ, ಬೌದ್ಧಿಕ ಸ್ವತ್ತು ಹಕ್ಕು ಮತ್ತು ವೈದ್ಯಕೀಯ ಸ್ವಾಯತ್ತತೆಯ ನಡುವಿನ ಸಮತೋಲನ ಅತೀ ಮುಖ್ಯವಾಗಿದೆ ಎಂದು ಹೇಳಿದರು.
ಗೋವಾದ ವಿ. ಎಂ. ಸಲ್ಗವ್ಕರ ಕಾಲೇಜ್ ಆಫ್ ಲಾ ಸಹಪ್ರಾಧ್ಯಾಪಕ ಡಾ. ಬಾಬುಗೌಡ ಪಾಟೀಲ, ಅವರು ವೈದ್ಯಕೀಯ ನಿರ್ಲಕ್ಷ್ಯ ಪ್ರಕರಣಗಳಲ್ಲಿ ಗ್ರಾಹಕ ಸಂರಕ್ಷಣಾ ಕಾಯ್ದೆ- 2019 ರ ಪಾತ್ರ ಕುರಿತು ಮಾಹಿತಿ ನೀಡಿದರು. ಗದಗ ಕರ್ನಾಟಕ ಮೆಡಿಕಲ್ ಕೌನ್ಸಿಲ್ ಸದಸ್ಯ ಡಾ. ಪವನ ಕುಮಾರ ಪಾಟೀಲ ಮಾತನಾಡಿ, ಭಾರತದಲ್ಲಿ ವೈದ್ಯಕೀಯ ನಿರ್ಲಕ್ಷ್ಯ ಕಾನೂನಿನ ಸುಧಾರಣೆ: ನಿಯಂತ್ರಣಾತ್ಮಕ ದೃಷ್ಟಿಕೋನ ಮಹತ್ವದ್ದಾಗಿದೆ ಎಂದು ಹೇಳಿದರು.
ಈ ಸಂದರ್ಭದಲ್ಲಿ ಕಾನೂನು ಶಾಲೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ವೈದ್ಯಕೀಯ ಕಾಲೇಜಿನ ಸಿಬ್ಬಂದಿ, ಪೊಲೀಸ್ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.
ಈ ವಿಚಾರ ಸಂಕೀರ್ಣದಲ್ಲಿ ಹಲವಾರು ಸ್ಪರ್ಧಿಗಳು ಪ್ರಬಂಧ ಮಂಡಿಸಿದರು. ಕಾಲೇಜಿನ ಪ್ರಾಚಾರ್ಯ ಡಾ. ಆರ್. ಜಿ. ಕುಲಕರ್ಣಿ ಸ್ವಾಗತಿಸಿದರು. ಸನಾ ಕೌಸರ್ ಮೊಘಲಾಯಿ ವಂದಿಸಿದರು. ಲಾವಣ್ಯ ಕುಲಕರ್ಣಿ, ನಿಕಿತಾ ನಿರೂಪಿಸಿದರು.

# ಪೌರ ಕಾರ್ಮಿಕರಿಗೆ ಸಮರ್ಪಕ ಸುರಕ್ಷತಾ ಪರಿಕರ ವಿತರಿಸಿ: ಡಾ. ಔದ್ರಾಮ



**ವಿಜಯಪುರ, ಮಾ.18:** ಪೌರ ಕಾರ್ಮಿಕ ವೇತನ ವಿಳಂಬ ಮಾಡದೆ ನಿಗದಿತ ಅವಧಿಯಲ್ಲಿ ಪಾವತಿಸುವಂತೆ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಧಿಕಾರಿಗಳಿಗೆ ಸೂಚಿಸಿದರು.ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ನಗರಾಭಿವೃದ್ಧಿ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮ್ಯಾನುಯಲ್ ಸ್ಕೆವೆಂಜರ್ಸ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಅಧಿನಿಯಮ 2013 ಜಿಲ್ಲಾ ಮಟ್ಟದ 3ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಹೊರಗುತ್ತಿಗೆ ಆಧಾರ ಮೇಲೆ ನಗರ ಸ್ಥಳೀಯ ಸಂಸ್ಥೆ ಹಾಗೂ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರು, ಸಫಾಯಿ ಕರ್ಮಚಾರಿ, ಪೌರ ಕಾರ್ಮಿಕರಿಗೆ ಕನಿಷ್ಟ ವೇತನದಡಿ ಇ.ಎಸ್.ಐ ಇ.ಪಿ.ಎಫ್ ಕಟಾವು ಮತ್ತು ವಿಮಾ ಕಂತಿನ ಸಮಗ್ರ ಮಾಹಿತಿಯನ್ನು ಕಾಲ ಕಾಲಕ್ಕೆ ಮಾಹಿತಿ ನೀಡಬೇಕು ಎಂದರು.ಕಾರ್ಮಿಕರ ಆರೋಗ್ಯದ ಹಿತ ಕಾಪಾಡುವ ನಿಟ್ಟಿನಲ್ಲಿ ಮೇಲಿಂದ ಮೇಲೆ ಆರೋಗ್ಯ ಶಿಬಿರಗಳನ್ನು ಏರ್ಪಡಿಸಬೇಕು. ಅವರಿಗೆ ಸುರಕ್ಷಿತ ಪರಿಕರಗಳನ್ನು ಸಮರ್ಪಕವಾಗಿ ವಿತರಿಸಲು ಕ್ರಮ ವಹಿಸಬೇಕು. ಪೌರ ಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ವಸತಿ ಸೌಲಭ್ಯ ಪಡೆದುಕೊಂಡಿರುವ ಫಲಾನುಭವಿಗಳ ಹಾಗೂ ಇಲ್ಲಿಯವರೆಗೆ ಹಕ್ಕು ಪತ್ರಗಳನ್ನು ವಿತರಿಸಿದ ವಿವರ ಒದಗಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಸ್ವಾವಲಂಬಿ ಸಾರಥಿ, ನೇರ ಸಾಲ, ಮೈಕ್ರೋಡಿಟ್ ಕಿರುಸಾಲ ಹಾಗೂ ಉಚಿತ ಲ್ಯಾಪ್ ಟಾಪ್ ಹಾಗೂ ಇತರ ಯೋಜನೆಗಳಲ್ಲಿ ಪಡೆದಿರುವ ಫಲಾನುಭವಿಗಳ ಮಾಹಿತಿ ಒದಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಸಿ.ಬಿ ಕುಂಬಾರ, ಮಹಾನಗರ ಪಾಲಿಕೆ ಉಪ ಆಯುಕ್ತ ಮಹಾವಿರ ಬೋರಣ್ಣವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ ಕುಮಾರ ಗುಣಾರಿ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮಹೇಶ ಪೋತದಾರ, ನಗರಾಭಿವೃದ್ಧಿ ಯೋಜನಾಧಿಕರಿ ಬದ್ರುದ್ದೀನ ಸೌದಾಗರ, ಸಫಾಯಿ ಕರ್ಮಚಾರಿ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ದಯಾನಂದ ಅಲಿಯಾಬಾದ, ಮಹಾದೇವಿ ಹಾದಿಮನಿ, ಸೇರಿದಂತೆ ಬಬಿನಾಬಾಯಿ ನಾಗರಾಳ ಹಾಗೂ ಇತರರು ಉಪಸ್ಥಿತರಿದ್ದರು.

# ಶೀಘ್ರದಲ್ಲೇ ರಾಜ್ಯ ಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ ಆಯೋಜನೆ:ಅಡಿವೇಶ ಇಟಗಿ

**ವಿಜಯಪುರ, ಮಾ. 18:**ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ರಾಜ್ಯ ಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳಲು ಬಾಲ ವಿಕಾಸ ಅಕಾಡೆಮಿ ನಿರ್ಧರಿಸಿದೆ ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ನೂತನ ಅಧ್ಯಕ್ಷ ಅಡಿವೇಶ ಇಟಗಿ ಹೇಳಿದರು.

ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಗೆ ಇದೇ ಮೊದಲ ಬಾರಿಗೆ ಭೇಟಿ ನೀಡಿ, ರಾಜ್ಯ ಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳುವ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಎಲ್ಲ ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು ಮಕ್ಕಳ ಸಾಹಿತ್ಯ ಸಮ್ಮೇಳನಕ್ಕೆ ಪೂರಕವಾದ ವಾತಾವರಣ ಹೊಂದಿರುವ ಜಿಲ್ಲೆಯಲ್ಲಿ ಈ ಸಮ್ಮೇಳನ ನಡೆಸಲಾಗುವುದು.

ಸಾಹಿತ್ಯದಲ್ಲಿ ಆಸಕ್ತಿ ಹೊಂದಿರುವ 18 ವರ್ಷದೊಳಗಿನ ಎಲ್ಲ ಮಕ್ಕಳು ಈ ಸಮ್ಮೇಳನದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ ಕೊಡಲಾಗುವುದು ಎಂದರು.

ಅದರಲ್ಲಿ ವಿಶೇಷವಾಗಿ ಸರ್ಕಾರಿ ಬಾಲಕರ ಬಾಲಮಂದಿರ, ಬಾಲಕಿಯರ ಬಾಲಮಂದಿರ ಮಕ್ಕಳನ್ನು ಕೂಡ ಭಾಗವಹಿಸುವಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.



ಮಾರ್ಚ್, ಎಪ್ರಿಲ್ ನಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ಹಾಗೂ ಶಿಕ್ಷಕರಿಗೆ ಮೌಲ್ಯ ಮಾಪನ ಪ್ರಕ್ರಿಯೆ ಇರುವುದರಿಂದ ಜೂನ್–2026 ರ 1 ನೇ ವಾರದಲ್ಲಿ ಮಕ್ಕಳ ಆಯ್ಕೆ ಪ್ರಕ್ರಿಯೆ ಹಾಗೂ ಜೂನ್–2026 ಕೊನೆಯ ವಾರದಲ್ಲಿ ರಾಜ್ಯ ಮಟ್ಟದಲ್ಲಿ ಮಕ್ಕಳ ಸಾಹಿತ್ಯ ಸಮ್ಮೇಳನ ಯಶ್ವಸಿಯಾಗಿ ನಡೆಸಲು ತಯಾರಿ ಮಾಡಿಕೊಳ್ಳಬೇಕೆಂದರು.

ಆಯಾ ಜಿಲ್ಲೆಯಲ್ಲಿರುವ ಮಕ್ಕಳ ಸಾಹಿತಿಗಳ ಪಟ್ಟಿ ಮಾಡಿಕೊಳ್ಳಲು ಎಲ್ಲ ಅಧಿಕಾರಿಗಳಿಗೂ ಸೂಚಿಸಿದರು. ಈ ಕುರಿತು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಸಿಇಒ ಜತೆ ಸಭೆ ಮಾಡಿ ಸಲಹೆ ಸೂಚನೆ ಪಡೆಯಲಾಗುವುದು ಎಂದರು.

ಮಕ್ಕಳ ಸರ್ವಾಂಗೀಣ ಬೆಳವಣಿಗೆ, ಸುರಕ್ಷತೆ ಹಾಗೂ ಭದ್ರತೆಗಾಗಿ ಇಲಾಖೆಯ ಎಲ್ಲ ಅಧಿಕಾರಿಗಳು ಸಕಾರಾತ್ಮಕವಾಗಿ ಕಾರ್ಯ ನಿರ್ವಹಿಸಬೇಕು ಎಂದರು.

ಜಿಲ್ಲಾ ನಿರೂಪಣಾ ಅಧಿಕಾರಿಗಳು ಮಾತನಾಡಿ, ಇಲಾಖೆ ವತಿಯಿಂದ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಮಾಡಲಾಗಿದ್ದು, ಅದೆ ರೀತಿ ಈ ಕಾರ್ಯಕ್ರಮದಲ್ಲಿ ಜಾನಪದ ಗೀತೆ, ಸಾಹಿತ್ಯ, ಸ್ವ–ರಚಿತ ಕವನ ವಾಚನ, ನೃತ್ಯ, ನಾಟಕ, ಡೊಳ್ಳು ಕುಣಿತ ಇಂತಹ ಅನೇಕ ಕಲೆಗಳನ್ನು ಹಾಗೂ ಸ್ಪರ್ಧೆಗಳನ್ನು ಮಾಡಬಹುದೆಂದರು.ತಾಲೂಕು ಮತ್ತು ಜಿಲ್ಲೆಗಳಲ್ಲಿ ಸಾಹಿತ್ಯಕ್ಕೆ ಸಂಬಂಧಿಸಿದಂತೆ ಸ್ಪರ್ಧೆಗಳನ್ನು ಏರ್ಪಡಿಸಿ ಪ್ರತಿ ಜಿಲ್ಲೆಯಿಂದ ಸಾಹಿತ್ಯ ಆಸಕ್ತಿ ಉಳ್ಳ 5 ಜನ ಮಕ್ಕಳನ್ನು ಗುರುತಿಸಿ ಆಯ್ಕೆ ಮಾಡಿ ರಾಜ್ಯ ಮಟ್ಟದಲ್ಲಿ ಕಳುಹಿಸಲಾಗುವುದು ಎಂದು ತಿಳಿಸಿದರು.

ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬಸವರಾಜ ಜಿಗಳೂರು ಮಾತನಾಡಿ, ಸಮ್ಮೇಳನಕ್ಕಿಂತ ಮುಂಚೆ ಮಕ್ಕಳ ರಥ ಕಾರ್ಯಕ್ರಮ ಮಾಡಬಹುದು ಎಂದರು.

ಈ ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆಧಿಕಾರಿಗಳು ಹಾಗೂ ಸಿಬ್ಬಂದಿಗಳು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲೆಯ ಎಲ್ಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲಾ ನಿರೂಪಣಾಧಿಕಾರಿ ನಿರ್ಮಲಾ .ಎಚ್. ಸುರಪುರ ವಂದಿಸಿದರು.

# ಸಾಲ ಸೌಲಭ್ಯಕ್ಕೆ ಸಲ್ಲಿಸಿದ ಫಲಾನುಭವಿಗಳ ಅರ್ಜಿಗಳನ್ನು ತಕ್ಷಣಕ್ಕೆ ವಿಲೇವಾರಿ ಮಾಡಿ: ಜಿಪಂ ಸಿಇಒ ರಿಷಿ ಆನಂದ ಕಟ್ಟುನಿಟ್ಟಿನ ಸೂಚನೆ

**ವಿಜಯಪುರ ಮಾ. 18:** ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಸೇರಿದಂತೆ ಸರಕಾರದ ವಿವಿಧ ಯೋಜನೆಯಡಿ ಅನೇಕ ಫಲಾನುಭವಿಗಳು ಸಾಲ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ಆದರೆ ಈವರೆಗೂ ಅರ್ಜಿಗಳನ್ನು ಬ್ಯಾಂಕ್ ಗಳು ಬಾಕಿ ಉಳಿಸಿಕೊಂಡಿದ್ದನ್ನು ಗಂಭೀರವಾಗಿ ಪರಿಗಣಿಸಿದ್ದು, ತಕ್ಷಣಕ್ಕೆ ಫಲಾನುಭವಿಗಳ ಅರ್ಜಿಗಳನ್ನು ತುರ್ತಾಗಿ ಪರಿಶೀಲಿಸಿ ವಿಲೇವಾರಿ ಮಾಡಬೇಕು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚಿಸಿದರು.

ಜಿಲ್ಲಾ ಅಗ್ರಣೀಯ ಬ್ಯಾಂಕ್ ವತಿಯಿಂದ ತ್ರೈಮಾಸಿಕ ಡಿಸ್ಟ್ರಿಕ್ಟ್ ಕನ್ಸಲ್ಟೇಟಿವ್ ಕಮಿಟಿ ಸಭೆ ಹಾಗೂ ಡಿಸ್ಟ್ರಿಕ್ಟ್ ಲೆವೆಲ್ ರಿವಿವ್ ಕಮಿಟಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಂದು ವಾರದಲ್ಲಿ ಬಾಕಿ ಉಳಿದ ಎಲ್ಲ ಅರ್ಜಿಗಳನ್ನು ಪರಿಶೀಲಿಸಿ ಸಂಪೂರ್ಣವಾಗಿ ವಿಲೇವಾರಿ ಮಾಡತಕ್ಕದ್ದು. ಒಂದು ವೇಳೆ ವಿಳಂಬವಾದಲ್ಲಿ ಸಂಬಂಧಿಸಿದ ಬ್ಯಾಂಕ್ ವ್ಯವಸ್ಥಾಪಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯ ಪಜಾ, ಪಪಂ, ಅಲ್ಪ ಸಂಖ್ಯಾತರ ಹೀಗೆ ಅನೇಕ ದುರ್ಬಲ ವರ್ಗಗಳ ಗ್ರಾಹಕರು ಸೇರದಂತೆ ಸಾಲ ಸೌಲಭ್ಯ ಕೋರಿ, ಬ್ಯಾಂಕ್ ಗಳಿಗೆ ಬಂದಾಗ ಸರಿಯಾಗಿ ಸ್ಪಂದಿಸಬೇಕು. ಅವರೊಂದಿಗೆ ಸಹಾನುಭೂತಿ ಹಾಗೂ ಸಕಾರಾತ್ಮಕ ಮನೋಭಾವದಿಂದ ವರ್ತಿಸಬೇಕು ಎಂದರು.

ಆರ್.ಬಿ.ಐ ಮಾರ್ಗಸೂಚಿ ಪ್ರಕಾರ ಬ್ಯಾಂಕ್ ಯೋಜನೆಗಳ ಬಗ್ಗೆ ಗ್ರಾಹಕರಿಗೆ ಜಾಗೃತಿ ಮೂಡಿಸಬೇಕು. ಜೊತೆಗೆ ಸೌಲಭ್ಯಗಳ




ಕುರಿತು ಮಾಡಬೇಕು. ಸಾಲ ಸೌಲಭ್ಯಗಳಿಗಾಗಿ ಅರ್ಜಿ ಸಲ್ಲಿಸಿದವರ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳುವಂತಿಲ್ಲ ಎಂದು ಸಿಇಒ ಬ್ಯಾಂಕ್ ವ್ಯವಸ್ಥಾಪಕರಿಗೆ ಕಟ್ಟು ನಿಟ್ಟಾಗಿ ಸೂಚನೆ ನೀಡಿದರು.

ಸಾರ್ವಜನಿಕರು ಬ್ಯಾಂಕ್ ಸಾಲಕ್ಕೆ ಅರ್ಜಿ ಸಲ್ಲಿಸಿದಾಗ, ದಾಖಲಾತಿಗಳು ಅಪೂರ್ಣ ಇದ್ದಲ್ಲಿ ಗ್ರಾಹಕರಿಗೆ ಸರಿಯಾದ ಮಾರ್ಗದರ್ಶನ ನೀಡಬೇಕು. ಪ್ರತಿಯೊಬ್ಬ ಗ್ರಾಹಕರ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡತಕ್ಕದ್ದು ಎಂದೂ ಹೇಳಿದರು.

ಬ್ಯಾಂಕ್ ಗಳಲ್ಲಿ ಹತ್ತು ಹಲವಾರು ಯೋಜನೆಗಳಿರುತ್ತವೆ. ಎಲ್ಲಾ ಯೋಜನೆಗಳ ಸದುಪಯೋಗ ಪಡಿಸಿಕೊಳ್ಳುವಂತೆ ಫಲಾನುಭವಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದರು. ವಿವಿಧ ಇಲಾಖೆಗಳಡಿ ಇರುವ ಯೋಜನೆಗಳಾದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ(ಎನ್.ಆರ್.ಎಲ್.ಎಮ್) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಇರುವ ಉದ್ಯೋಗಿನಿ ಯೋಜನೆ, ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಇರುವ ಸ್ವಾವಲಂಬಿ ಸಾರಥಿ ಯೋಜನೆ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸ್ವಾವಲಂಬಿ ಟ್ಯಾಕ್ಸಿ, ಗೂಡ್ಸ್, ಆಟೋ ರಿಕ್ಷಾ ಯೋಜನೆಗಳು, ಡಾ. ಬಿ. ಆರ್. ಅಂಬೇಡ್ಕರ್ ನಿಗಮದ ಯೋಜನೆಗಳು, ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕರ್ಯಕ್ರಮ, ಸಮಾಜ ಕಲ್ಯಾಣ ಇಲಾಖೆಯ ಉದ್ಯಮ ಶೀಲತಾ, ಸ್ವಾವಲಂಬಿ ಸಾರಥಿ, ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ), ಕೃಷಿ ಇಲಾಖೆಯ ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರಿಕೀಕರಣ ಯೋಜನೆ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಹೆಸ್ಕಾಂ ಇಲಾಖೆಯ ಪ್ರಧಾನ ಮಂತ್ರಿ ಸರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ ಸೇರಿದಂತೆ ಗ್ರಾಹಕರು ಅನೇಕ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವ ಅರ್ಹರೆಲ್ಲರ ಅರ್ಜಿಗಳನ್ನು ವಾರದೊಳಗೆ ವಿಲೇವಾರಿ ಮಾಡಬೇಕು ಎಂದರು.

ಅಲ್ಪಸಂಖ್ಯಾತರು, ಮಹಿಳೆಯರು, ಪ.ಜಾ/ಪ.ಪಂ ವರ್ಗಗಳಿಗೆ ನೀಡಲು ಅವಕಾಶವಿರುವ ಎಲ್ಲ ಸೌಲಭ್ಯಗಳನ್ನು ಕಡ್ಡಾಯವಾಗಿ ಒದಗಿಸುವುದು ನಿಮ್ಮೆಲ್ಲರ ಜವಾಬ್ದಾರಿಯಾಗಿದೆ. ಹಾಗಾಗಿ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸಬೇಕು. ಈ ನಿಟ್ಟಿನಲ್ಲಿ ಎಲ್ಲ ಫಲಾನುಭವಿಗಳಿಗೆ ಯೋಜನೆಗಳನ್ನು ತಲುಪಿಸುವಲ್ಲಿ ಯಶಸ್ವಿಯಾಗಲು ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನಾ ಕೈಗೊಳ್ಳಬೇಕು. ಪ್ರತಿ 15 ದಿನಗಳ ಅಂತರದಲ್ಲಿ ಸಾಧನೆಯಾಗಿರುವ ಪ್ರಗತಿ ಕುರಿತು ವರದಿಯನ್ನು ಕಡ್ಡಾಯವಾಗಿ ಜಿಲ್ಲಾ ಪಂಚಾಯತಿಗೆ ಸಲ್ಲಿಸಬೇಕು ಎಂದರು. ಮುಂಬರುವ ತ್ರೈಮಾಸಿಕ ಸಭೆಯಲ್ಲಿ ಯಾವುದೇ ಫಲಾನುಭವಿಗಳ ಅರ್ಜಿಗಳು ಬ್ಯಾಂಕ್ ಗಳಲ್ಲಿ ಬಾಕಿ ಉಳಿಯದಂತೆ ಕ್ರಮ ಕೈಗೊಳ್ಳಬೇಕು ಎಂದು ಬ್ಯಾಂಕ್ ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.ಬಳಿಕ ಜಿಪಂ ಸಿಇಒ ರಿಷಿ ಆನಂದ ಅವರು, 2026–27ನೇ ಸಾಲಿನ ಸಂಭಾವ್ಯ ಸಾಲ ಯೋಜನೆಯ ಸಂಭಾವ್ಯ ಲಿಂಕ್ಡ್ ಯೋಜನೆಯ ಪುಸ್ತಕವನ್ನು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ನಬಾರ್ಡ್ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ವಿಕಾಸ ರಾಠೋಡ, ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಬಿ. ಸಿದ್ದಯ್ಯ, ಆರ್.ಬಿ.ಐ ವ್ಯವಸ್ಥಾಪಕ ಶೀಲ್ ಪ್ರಿಯಾ ಗೌತಮ್, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಾಗದದಲ್ಲಿ ಭರ್ಜರಿ ಯೋಜನೆ ನೆಲದಲ್ಲಿ ಕಳಪೆ ಕಾಮಗಾರಿ

**ಯಾದಗಿರಿ:ಮಾ.18:** ಶಹಾಪುರ ತಾಲೂಕಿನ ದೊರನಹಳ್ಳಿ ಪಟ್ಟಣದಲ್ಲಿನ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿ ಇದೀಗ ಗಂಭೀರ ಪ್ರಶ್ನೆಗಳನ್ನು ಹುಟ್ಟಿಸಿದೆ. ಕಾಗದದಲ್ಲಿ ಭರ್ಜರಿ ಯೋಜನೆಯಾಗಿ ಘೋಷಿಸಲ್ಪಟ್ಟ ಈ ಆಸ್ಪತ್ರೆ ಕಟ್ಟಡ, ನೆಲಮಟ್ಟದಲ್ಲಿ ಕಳಪೆ ಕಾಮಗಾರಿಯ ಉದಾಹರಣೆಯಾಗಿ ಪರಿಣಮಿಸುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಗ್ರಾಮೀಣ ಪ್ರದೇಶದ ಜನತೆಗೆ ಸಮಗ್ರ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ 6.50 ಕೋಟಿ ವೆಚ್ಚದಲ್ಲಿ ಈ ಬೃಹತ್ ಯೋಜನೆಗೆ ಚಾಲನೆ ನೀಡಲಾಗಿತ್ತು. ಯೋಜನೆಯ ಪ್ರಕಾರ, 30ರಿಂದ 50 ಹಾಸಿಗೆಗಳ ಸಾಮರ್ಥ್ಯ ಹೊಂದಿರುವ ಈ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸಾ ಘಟಕ, ಪ್ರಸೂತಿ ವಿಭಾಗ, ಸಾಮಾನ್ಯ ಚಿಕಿತ್ಸಾ ವಿಭಾಗ ಸೇರಿದಂತೆ ಹಲವು ಆಧುನಿಕ ಸೌಲಭ್ಯಗಳನ್ನು ಒದಗಿಸುವ ಗುರಿ ಹೊಂದಲಾಗಿತ್ತು.

ಆದರೆ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಭೇಟಿ ನೀಡಿದ ಸ್ಥಳೀಯರು ಮತ್ತು ಸಾರ್ವಜನಿಕರು, ನಿರ್ಮಾಣದ ಗುಣಮಟ್ಟದ ಬಗ್ಗೆ ಗಂಭೀರ ಅನುಮಾನ ವ್ಯಕ್ತಪಡಿಸಿದ್ದಾರೆ. ಕಟ್ಟಡದ ಗೋಡೆಗಳಲ್ಲಿ ಬಿರುಕುಗಳು ಕಾಣಿಸಿಕೊಳ್ಳುತ್ತಿರುವುದು, ಸಿಮೆಂಟ್ ಮಿಶ್ರಣ ಸಮರ್ಪಕವಾಗಿಲ್ಲದಿರುವುದು, ಕಂಬಗಳು ಮತ್ತು ಸ್ಲ್ಯಾಬ್ ನಿರ್ಮಾಣದಲ್ಲಿ ತಾಂತ್ರಿಕ ಮಾನದಂಡಗಳನ್ನು ಪಾಲಿಸದಿರುವುದು ಕಂಡುಬರುತ್ತಿದೆ ಎಂಬ ಆರೋಪ ಕೇಳಿಬಂದಿದೆ.

ಸ್ಥಳೀಯ ನಿವಾಸಿ ಭೀಮು ಸಾವೂರು ಮಾತನಾಡಿ, "ಈ ಕಟ್ಟಡ ಸಂಪೂರ್ಣವಾಗಿ ಕಳಪೆ ಗುಣಮಟ್ಟದಲ್ಲಿ ನಿರ್ಮಾಣವಾಗುತ್ತಿದೆ. ಗಾತ್ರದ ಪ್ರಮಾಣವೂ ಸರಿಯಾಗಿ ಇಲ್ಲ. ಇಂತಹ ನಿರ್ಲಕ್ಷ್ಯದಿಂದ ನಿರ್ಮಾಣವಾಗುತ್ತಿರುವ ಕಟ್ಟಡ ಭವಿಷ್ಯದಲ್ಲಿ ಅಪಾಯಕಾರಿಯಾಗಬಹುದು. ತಕ್ಷಣ ಜಿಲ್ಲಾಡಳಿತ ಹಸ್ತಕ್ಷೇಪ ಮಾಡಿ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ, ತಾಂತ್ರಿಕ ತನಿಖೆ ನಡೆಸಬೇಕು" ಎಂದು ಆಗ್ರಹಿಸಿದರು.

ಇನ್ನಿತರ ಗ್ರಾಮಸ್ಥರು ಕೂಡ ಆಕ್ರೋಶ ವ್ಯಕ್ತಪಡಿಸಿ, "ಜನರ ತೆರಿಗೆ ಹಣದಿಂದ ನಿರ್ಮಾಣವಾಗುತ್ತಿರುವ ಈ ಯೋಜನೆಯಲ್ಲಿ ಪಾರದರ್ಶಕತೆ ಕಾಣುತ್ತಿಲ್ಲ. ಕಾಮಗಾರಿಯ ಎಸ್ಟಿಮೇಟ್ ಕಾಪಿ




ಕೇಳಿದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಇದು ಸಂಶಯಗಳಿಗೆ ಕಾರಣವಾಗಿದೆ" ಎಂದು ಆರೋಪಿಸಿದ್ದಾರೆ.

ತಜ್ಞರ ಅಭಿಪ್ರಾಯದ ಪ್ರಕಾರ, ಆರೋಗ್ಯ ಕೇಂದ್ರಗಳಂತಹ ಸಾರ್ವಜನಿಕ ಕಟ್ಟಡಗಳಲ್ಲಿ ಗುಣಮಟ್ಟದ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸದಿದ್ದರೆ, ಭವಿಷ್ಯದಲ್ಲಿ ದೊಡ್ಡ ಅಪಾಯಗಳು ಸಂಭವಿಸುವ ಸಾಧ್ಯತೆ ಇರುತ್ತದೆ. ವಿಶೇಷವಾಗಿ ಮಳೆಗಾಲ ಅಥವಾ ಭೂಕಂಪದಂತಹ ಪ್ರಕೃತಿ ವಿಕೋಪಗಳ ಸಂದರ್ಭಗಳಲ್ಲಿ ಇಂತಹ ಕಟ್ಟಡಗಳು ದುರ್ಬಲಗೊಳ್ಳುವ ಅಪಾಯ ಹೆಚ್ಚಿದೆ.

ಈ ಹಿನ್ನೆಲೆಯಲ್ಲಿ ಸ್ಥಳೀಯರು ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ, ಕಾಮಗಾರಿಯ ಸಮಗ್ರ ತಾಂತ್ರಿಕ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ. ಕಳಪೆ ಕಾಮಗಾರಿ ದೃಢಪಟ್ಟಲ್ಲಿ ಗುತ್ತಿಗೆದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

"ಆಸ್ಪತ್ರೆ ಕಟ್ಟಡ ಎಂದರೆ ಕೇವಲ ಇಟ್ಟಿಗೆ–ಸಿಮೆಂಟ್ ಅಲ್ಲ, ಅದು ಜನರ ಜೀವ ಉಳಿಸುವ ಕೇಂದ್ರ. ಇಂತಹ ಮೂಲಸೌಕರ್ಯಗಳಲ್ಲಿ ಗುಣಮಟ್ಟದ ಮೇಲೆ ಯಾವುದೇ ರೀತಿಯ ರಾಜಿ ಆಗಬಾರದು" ಎಂದು ಸಾರ್ವಜನಿಕರು ಒತ್ತಿ ಹೇಳಿದ್ದಾರೆ.ಈ ಕುರಿತು ಇಂಜಿನಿಯರ್ ರವಿ ಯಾದವ್ ಹಾಗೂ ಆಡಳಿತಾಧಿಕಾರಿ ಡಾ. ಗಂಗಾಧರ್ ಶೆಟ್ರಿಕಿ ಅವರ ಗಮನಕ್ಕೆ ವಿಷಯವನ್ನು ತರಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳ ಅಧಿಕೃತ ಪ್ರತಿಕ್ರಿಯೆಗಾಗಿ ಸಾರ್ವಜನಿಕರು ಕಾಯುತ್ತಿದ್ದಾರೆ.

## ರಾಜ್ಯ ಆಡಳಿತದಲ್ಲಿ ನಿರ್ಲಕ್ಷ್ಯ ಹೆಚ್ಚಳ: ಜನರ ಪ್ರಶ್ನೆಗಳಿಗೆ ಉತ್ತರವೇ ಇಲ್ಲ : ಶ್ರೀಧರ ಸಾಹುಕಾರ ಕಿಡಿ

**ಯಾದಗಿರಿ:ಮಾ.18**: ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಜನಸಾಮಾನ್ಯರ ನಿರೀಕ್ಷೆಗಳನ್ನು ಈಡೇರಿಸಲು ವಿಫಲವಾಗುತ್ತಿದೆ ಎಂದು ಬಿಜೆಪಿ ಯುವ ಘಟಕದ ಜಿಲ್ಲಾಧ್ಯಕ್ಷ ಶ್ರೀಧರ ಸಾಹುಕಾರ ಗಂಭೀರ ಆರೋಪ ಮಾಡಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ, ವಿಧಾನಸಭೆ ಅಧಿವೇಶನವು ಜನರ ಸಮಸ್ಯೆಗಳನ್ನು ಚರ್ಚಿಸಿ ಪರಿಹಾರ ಕಂಡುಕೊಳ್ಳುವ ವೇದಿಕೆಯಾದರೂ, ಇತ್ತೀಚಿನ ದಿನಗಳಲ್ಲಿ ಅದೇ ನಿರ್ಲಕ್ಷ್ಯಕ್ಕೆ ಒಳಗಾಗಿರುವುದು ವಿಷಾದನೀಯ. ಸಚಿವರು ಸಭೆಗೆ ಗೈರು ಹಾಜರಾಗುವುದು, ಅಧಿಕಾರಿಗಳು ಸಮರ್ಪಕ ಮಾಹಿತಿಯನ್ನು ಒದಗಿಸದಿರುವುದು ಆಡಳಿತದ ಅಸಮರ್ಪಕತೆಯನ್ನು ತೋರಿಸುತ್ತದೆ ಎಂದು ಅವರು ಹೇಳಿದರು. ರಾಜ್ಯದ ನಾಯಕತ್ವದಲ್ಲಿ ಸ್ಪಷ್ಟ ದಿಕ್ಕು ಕಾಣಿಸುತ್ತಿಲ್ಲ. ಆಡಳಿತಕ್ಕಿಂತ ರಾಜಕೀಯ ಪ್ರಾಬಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂಬ ಟೀಕೆ ವ್ಯಕ್ತಪಡಿಸಿದ ಅವರು, ಇದರ ಪರಿಣಾಮವಾಗಿ ಜನರ ಸಮಸ್ಯೆಗಳು ಬಗೆಹರಿಯದೆ ಉಳಿಯುತ್ತಿವೆ ಎಂದು ಅಭಿಪ್ರಾಯಪಟ್ಟರು.

ಸರ್ಕಾರದ ಕಾರ್ಯವೈಖರಿಯಿಂದ ಅಭಿವೃದ್ಧಿ ಯೋಜನೆಗಳು ನಿಧಾನಗತಿಯಲ್ಲಿದ್ದು, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಮುಂದುವರಿದಿದೆ. ಇದರಿಂದ



ಸಾರ್ವಜನಿಕರಲ್ಲಿ ಅಸಮಾಧಾನ ಹೆಚ್ಚುತ್ತಿದೆ ಎಂದು ಹೇಳಿದರು. ಭ್ರಷ್ಟಾಚಾರದ ಆರೋಪಗಳು ಹೆಚ್ಚುತ್ತಿರುವುದು ಕೂಡ ಆಡಳಿತದ ಮೇಲೆ ಜನರ ನಂಬಿಕೆಯನ್ನು ಕುಗ್ಗಿಸಿದೆ. ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಕೊರತೆಯಿದ್ದು, ಇದನ್ನು ಸರಿಪಡಿಸುವ ಅಗತ್ಯವಿದೆ ಎಂದು ಸೂಚಿಸಿದರು.

ಸರ್ಕಾರ ಜನಪರ ಆಡಳಿತ ನೀಡಲು ವಿಫಲವಾದರೆ, ಮುಂದಿನ ದಿನಗಳಲ್ಲಿ ಜನರು ತಮ್ಮ ನಿರ್ಣಯದ ಮೂಲಕ ಸ್ಪಷ್ಟ ಸಂದೇಶ ನೀಡಲಿದ್ದಾರೆ ಎಂದು ಶ್ರೀಧರ ಸಾಹುಕಾರ ಎಚ್ಚರಿಸಿದರು.

# ಮಾರ್ಚ್ 25ರಂದು ಪತ್ರಕರ್ತರಿಗೆ ವಿಶೇಷ ಕಾರ್ಯಾಗಾರ

**ರಾಯಚೂರು ಮಾ,18–** ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆ ಬೆಂಗಳೂರು ವತಿಯಿಂದ ರಾಯಚೂರಿನಲ್ಲಿ ಮಾರ್ಚ್ 25ರ ಬುಧವಾರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪತ್ರಕರ್ತರಿಗಾಗಿ ಒಂದು ದಿನದ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ ಅನುಷ್ಠಾನಗೊಂಡಿರುವ ಯೋಜನೆಗಳ ಕುರಿತು ಮಾಹಿತಿ ನೀಡುವುದು ಸೇರಿದಂತೆ ಸಂವಾದ ಏರ್ಪಡಿಸಲಾಗಿದ್ದು, ಪತ್ರಕರ್ತರು ಕಾರ್ಯಾಗಾರದಲ್ಲಿ ಭಾಗಿಯಾಗಿ, ಯಶಸ್ವಿಗೊಳಿಸಬೇಕೆಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆಯ ಪ್ರಕಟಣೆ ತಿಳಿಸಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE